24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA । EDITOR : K.R. RENU । RNI No. DELKAN/2003/10363 । ಪುಟ 8 । ಸಂಪುಟ 24 । ಸಂಚಿಕೆ 117 । ನವದೆಹಲಿ । ಬೆಲೆ ₹10। ಅಕ್ಟೋಬರ್ 23, 2026 ಶುಕ್ರವಾರ

ದಿವ್ಯ ಸಾನಿಧ್ಯ

ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ
ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಗಳು
ಪೀಠಾಧ್ಯಕ್ಷರು, ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠ

ಶ್ರೀಮದ್ ನಿರಂಜನ ಪ್ರಣವ ಶ್ರೀ ಶ್ರೀ ಶ್ರೀ
ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಗಳು
ಪೀಠಾಧ್ಯಕ್ಷರು, ಸುಕ್ಷೇತ್ರ ಶ್ರೀ ಕೋಡಿಮಠ ಮಹಾಸಂಸ್ಥಾನ, ಹಾರನಹಳ್ಳಿ

ಪರಮಪೂಜ್ಯ ಶ್ರೀ ಶ್ರೀ ಶ್ರೀ
ನಿಶ್ಚಲಾನಂದನಾಥ ಸ್ವಾಮೀಜಿಗಳು
ಪೀಠಾಧ್ಯಕ್ಷರು, ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠ, ಕೆಂಗೇರಿ

ಪರಮಪೂಜ್ಯ ಶ್ರೀ ಶ್ರೀ ಶ್ರೀ
ಡಾ. ನಂಜಾವಧೂತ ಸ್ವಾಮೀಜಿಗಳು
ಪೀಠಾಧ್ಯಕ್ಷರು, ಶ್ರೀ ಸ್ಫಟಿಕಪುರಿ ಮಹಾಸಂಸ್ಥಾನ ಮಠ

ಪರಮಪೂಜ್ಯ ಶ್ರೀ ಶ್ರೀ ಶ್ರೀ
ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿಗಳು
ಪೀಠಾಧ್ಯಕ್ಷರು, ಶ್ರೀ ಮಾದಾರ ಚೆನ್ನಯ್ಯ ಗುರುಪೀಠ, ಚಿತ್ರದುರ್ಗ

ನಿತ್ಯ ಪಂಚಾಂಗ 23.10.2026 ಶುಕ್ರವಾರ

ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಪ್ರದೋಷ, ವಿದಳ ವ್ರತರಂಭ, ಹೊರನಡು ಅನ್ನಪೂರ್ಣೇಶ್ವರಿ ಚಂಡೀಹೋಮ, ಮುನಿವಳ್ಳಿ ಕೈವಲ್ಯಶ್ರಮ ಸ್ವಮಿ ಆರಧನೆ

ದಿನ	ರಾಹುಕಾಲ	ಯಮಗಂಡ	ಗುಳಕಕಾಲ
ಭಾನು	ಸ. 5.04– 6.33	12.00– 1.30	3.00– 4.00
ಸೋಮ	ಬೆ. 7.20– 9.04	10.30–12.00	1.30– 3.00
ಮಂಗಳ	ಮ. 3.25– 4.59	9.00–10.30	12.00– 1.30
ಬುಧ	ಮ.12.16– 1.50	7.30– 9.00	10.30– 12.00
ಗುರು	ಮ. 1.50– 3.29	6.00– 7.30	9.00– 10.30
ಶುಕ್ರ	ಬೆ.10.42–12.16	3.00– 4.30	7.30– 9.00
ಶನಿ	ಬೆ. 9.07–10.41	1.30– 3.00	6.00– 7.30

ಮೈಸೂರು ನಂದಿಧ್ವಜ ಪೂಜೆ ವೇಳೆ ಸಚಿವರಿಗೆ ಅವಕಾಶ ನಿರಾಕರಣೆ: ವಿಚಾರಣೆಗೆ ಸಿಎಂ ಆದೇಶ

ಬೆಂಗಳೂರು, ಅ. 22: ಮೈಸೂರು ಅರಮನೆ ಆವರಣದಲ್ಲಿ ನಿನ್ನೆ ನಡೆದ ನಂದಿಧ್ವಜ ಪೂಜೆ ಸಂದರ್ಭದಲ್ಲಿ ಸಚಿವರಾದ ಎಚ್.ಸಿ. ಬಾಲಕೃಷ್ಣ, ನರೇಂದ್ರಸ್ವಾಮಿ, ಬಸವಂತಪ್ಪ ಅವರನ್ನು ಪೂಜೆ ಆವರಣ ಪ್ರವೇಶಿಸಲು ಪೊಲೀಸ್ ಅಧಿಕಾರಿಗಳು ನಿರ್ಬಂಧಿಸಿದ ಪ್ರಕರಣದ ಬಗ್ಗೆ ವಿಚಾರಣೆ ನಡೆಸಿ ವರದಿ ನೀಡುವಂತೆ ಸಿಎಂ ಡಿ.ಕೆ. ಶಿವಕುಮಾರ್ ಅವರು ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಸೂಚನೆ ನೀಡಿದ್ದಾರೆ. ಮಂತ್ರಿಗಳನ್ನೇ ನಿರ್ಬಂಧಿಸುವ ಮೂಲಕ ಅಧಿಕಾರಿಗಳು ಉದ್ಧಟತನದಿಂದ ವರ್ತಿಸಿರುವುದು ಕಂಡು ಬಂದಿದೆ. ತಕ್ಷಣ ಖುದ್ದು ನಾನೇ ಮಧ್ಯಪ್ರವೇಶಿಸಿ ಮಂತ್ರಿಗಳ ಪ್ರವೇಶಕ್ಕೆ ಅನುವು ಮಾಡಿಕೊಟ್ಟಿದ್ದೇನೆ. ಆದರೂ ಅಧಿಕಾರಿಗಳ ಉಡಾಫೆ ಸಹಿಸಲು ಆಗುವುದಿಲ್ಲ. ಹೀಗಾಗಿ ಇದಕ್ಕೆ ಹೊಣೆಗಾರರು ಯಾರು ಎಂಬ ಬಗ್ಗೆ ವಿಚಾರಣೆ ನಡೆಸಿ ವರದಿ ನೀಡುವಂತೆ ಮುಖ್ಯ ಕಾರ್ಯದರ್ಶಿ ಅವರಿಗೆ ಆದೇಶಿಸಿದ್ದೇನೆ ಎಂದು ಸಿಎಂ ಅವರು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ವರದಿ ಬಂದ ನಂತರ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಸ್ಪಷ್ಟಪಡಿಸಿದ್ದಾರೆ.

ಶಿಷ್ಟಾಚಾರ ಪಾಲಿಸುವ ವೇಳೆ ಕೆಲ ಸಚಿವರನ್ನು ತಡೆದಿದ್ದಕ್ಕೆ ಜಾತಿ ಬಣ್ಣ ಹಚ್ಚುವುದು ಕೀಳುಮಟ್ಟದ ಆಲೋಚನೆ: ಡಿಸಿಎಂ ಡಾ. ಪರಮೇಶ್ವರ್

ಬೆಂಗಳೂರು ಅ.22: ಮೈಸೂರು ದಸರಾ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಶಿಷ್ಟಾಚಾರ ಪಾಲಿಸುವ ವೇಳೆ ಕೆಲ ಸಚಿವರನ್ನು ತಡೆದ ಘಟನೆಗಳಿಗೆ ಜಾತಿಯ ಬಣ್ಣ ಹಚ್ಚುವುದು ಕೀಳುಮಟ್ಟದ ಆಲೋಚನೆ. ಇಂತಹ ವಿಚಾರಗಳನ್ನು ರಾಜಕೀಯಕ್ಕೆ ಬಳಸಿಕೊಳ್ಳುವುದು ಸರಿಯಲ್ಲ ಎಂದು ಉಪಮುಖ್ಯಮಂತ್ರಿ ಡಾ.ಜಿ ಪರಮೇಶ್ವರ್ ಹೇಳಿದರು.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮುಖ್ಯಮಂತ್ರಿಗಳಿಗೆ ಅವರದೇ ಆದ ಶಿಷ್ಟಾಚಾರವಿರುತ್ತದೆ. ಅದನ್ನು ಪೊಲೀಸರು ಕಟ್ಟುನಿಟ್ಟಾಗಿ ಪಾಲಿಸಬೇಕಾಗುತ್ತದೆ. ವಿಶೇಷವಾಗಿ ಅಪಾರ ಜನಸಂದಣಿ ಇರುವ ಸಂದರ್ಭಗಳಲ್ಲಿ ಭದ್ರತೆ ಮತ್ತು ಶಿಷ್ಟಾಚಾರದ ನಿಯಮಗಳನ್ನು ಹೆಚ್ಚು ಕಟ್ಟುನಿಟ್ಟಾಗಿ ಅನುಸರಿಸಲಾಗುತ್ತದೆ. ಮುಖ್ಯಮಂತ್ರಿಗಳನ್ನು ಹೊರತುಪಡಿಸಿ ಬೇರೆ ಯಾರನ್ನೂ ಒಳಗೆ ಬಿಡಬಾರದು ಎಂಬ ಸೂಚನೆ ಪೊಲೀಸರಿಗೆ ಇದ್ದಿರಬಹುದು. ಈ ಬಗ್ಗೆ ನನಗೆ ನಿಖರ ಮಾಹಿತಿ ಇಲ್ಲ. ಆದರೆ, ಮೇಲಧಿಕಾರಿಗಳಿಂದ ಬಂದ ಸೂಚನೆಗಳನ್ನು ಪೊಲೀಸರು ಪಾಲಿಸಿರುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು. ಮುಖ್ಯಮಂತ್ರಿಗಳು ಮುಂದೆ ಸಾಗುತ್ತಿದ್ದ ಸಂದರ್ಭದಲ್ಲಿ ಸಚಿವರನ್ನು ಪೊಲೀಸರು ತಡೆದಿದ್ದರೂ, ನಂತರ ಮುಖ್ಯಮಂತ್ರಿಗಳೇ ಹಿಂದಿರುಗಿ ಅವರನ್ನು ಕರೆದುಕೊಂಡು ಹೋಗಿದ್ದಾರೆ. ಪೊಲೀಸರು ತಮ್ಮ ಕರ್ತವ್ಯವನ್ನು ನಿರ್ವಹಿಸಿದ್ದಾರೆ. ಈ ವಿಚಾರದಲ್ಲಿ ಅನಗತ್ಯ ವಿವಾದ ಸೃಷ್ಟಿಸುವುದು ಸರಿಯಲ್ಲ ಎಂದು ಹೇಳಿದರು. ಈ ಘಟನೆಯನ್ನು ಮುಂದಿಟ್ಟುಕೊಂಡು 'ದಲಿತ ಸಚಿವರು' ಎಂಬ ಪದವನ್ನು ಪದೇಪದೆ ಬಳಸುತ್ತಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಅವರು, ಸಚಿವರು ಎಂದು ಕರೆದರೆ ಸಾಕಲ್ಲವೇ ಪ್ರತಿಯೊಬ್ಬರನ್ನೂ ಅವರ ಜಾತಿಯ ಹೆಸರಿನಿಂದಲೇ ಗುರುತಿಸಬೇಕೇ ಬೇರೆ ಸಚಿವರನ್ನು ಅವರ ಜಾತಿಯ ಹೆಸರಿನಿಂದ ಕರೆಯಲಾಗುತ್ತದೆಯೇ ಎಂದು ಪ್ರಶ್ನಿಸಿದರು.

ರಾಜ್ಯೋತ್ಸವ ಪ್ರಶಸ್ತಿ ಆಯ್ಕೆ ಸಮಿತಿ 2ನೇ ಸಭೆ

ಜಿಲ್ಲಾವಾರು ಪ್ರಾತಿನಿಧ್ಯ, ಸಾಮಾಜಿಕ ನ್ಯಾಯಕ್ಕೆ ಆದ್ಯತೆ

ಸಿಎಂ ಜತೆ ಚರ್ಚಿಸಿ ಅಂತಿಮ ಪಟ್ಟಿ ಪ್ರಕಟ: ಸಚಿವ ಶಿವರಾಜ್ ತಂಗಡಗಿ

ಬೆಂಗಳೂರು, ಅ.22: ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕನ್ನಡ ಮತ್ತು ಸಂಸ್ಕೃತಿ ಹಾಗೂ ,ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಎಸ್. ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ರಾಜ್ಯೋತ್ಸವ ಪ್ರಶಸ್ತಿ ಆಯ್ಕೆ ಸಲಹಾ ಸಮಿತಿಯ ಎರಡನೇ ಸಭೆ ನಡೆಯಿತು.

ಸಭೆಯಲ್ಲಿ ರಾಜ್ಯೋತ್ಸವ ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಜಿಲ್ಲಾ ಪ್ರಾತಿನಿಧ್ಯ ಹಾಗೂ ಸಾಮಾಜಿಕ ನ್ಯಾಯಕ್ಕೆ ಆದ್ಯತೆ ನೀಡುವ ಜೊತೆಗೆ ಅರ್ಹತೆಯನ್ನೇ ಮುಖ್ಯಮಾನದಂಡವಾಗಿ ಪರಿಗಣಿಸಲು ಚರ್ಚಿಸಲಾಯಿತು. ಪ್ರಶಸ್ತಿಗೆ ಅರ್ಹರಾದವರ ಆಯ್ಕೆ ಕುರಿತಂತೆ ಸಮಿತಿಯ ಸದಸ್ಯರು ತಮ್ಮ ಅಭಿಪ್ರಾಯ ಹಾಗೂ ಸಲಹೆಗಳನ್ನು ಮಂಡಿಸಿದರು.

ಮುಂದಿನ ಹಂತದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಆಯ್ಕೆ ಸಲಹಾ ಸಮಿತಿಯ ಸಭೆ ನಡೆಯಲಿದ್ದು, ಬಳಿಕ ಉನ್ನತಮಟ್ಟದ ಸಮಿತಿ ಸಭೆ ನಡೆಸಿ ಪ್ರಶಸ್ತಿ ಪುರಸ್ಕೃತರ ಅಂತಿಮ ಆಯ್ಕೆ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

ಪ್ರಶಸ್ತಿ ಆಯ್ಕೆ ಪ್ರಕ್ರಿಯೆಯ ಗೌಪ್ಯತೆಯನ್ನು ಕಾಪಾಡುವಂತೆ ಸಮಿತಿ ಸದಸ್ಯರಿಗೆ ಸಚಿವರು ಕಿವಿಮಾತು ಹೇಳಿದರು. ಅಂತಿಮ ಸಭೆ ನಡೆದು ತೀರ್ಮಾನ ಕೈಗೊಳ್ಳುವವರೆಗೆ ಸಭೆಯಲ್ಲಿ ನಡೆದ ಚರ್ಚೆಗಳು ಹಾಗೂ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳಬಾರದು ಎಂದು ಸೂಚಿಸಿದರು.

ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ಸಮಿತಿ ಸದಸ್ಯರು ತಾವು ಶಿಫಾರಸು ಮಾಡಿದ ಅಭ್ಯರ್ಥಿಗಳ ಅರ್ಹತೆ, ಸಾಧನೆ ಹಾಗೂ ಪ್ರಶಸ್ತಿಗೆ ಅವರು ಏಕೆ ಅರ್ಹರು ಎಂಬುದನ್ನು ಸಮರ್ಥವಾಗಿ ವಿವರಿಸಬೇಕು. ಈ ಹಂತದಲ್ಲಿಯೂ ಸದಸ್ಯರು ತಮ್ಮ ಸಲಹೆ ಹಾಗೂ ಅಭಿಪ್ರಾಯಗಳನ್ನು ಮಂಡಿಸಬಹುದಾಗಿದೆ ಎಂದು ತಂಗಡಗಿ ತಿಳಿಸಿದರು.

ಸಭೆಯಲ್ಲಿ ಮಾಜಿ ಸಚಿವೆ ಜಯಮಾಲಾ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ್ ಬಿಳಿಮಲೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಾರ್ಯದರ್ಶಿ ಮಂಜುಶ್ರೀ, ನಿರ್ದೇಶಕ ಎಸ್.ನಾರಾಯಣ್, ಸಂಗೀತ ನಿರ್ದೇಶಕ ಸಾಧುಕೋಕಿಲ, ಇಲಾಖೆ ನಿರ್ದೇಶಕಿ ವಸುಂಧರಾ, ಅಕಾಡೆಮಿ ಅಧ್ಯಕ್ಷರು ಹಾಗೂ ಆಯ್ಕೆ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ಇ.ವಿ, ಸಿಐಇ ಪರೀಕ್ಷಾ ಕೇಂದ್ರ ಸ್ಥಾಪನೆಗೆ ಕೇಂದ್ರ ಒಲವು

ಸೂಕ್ತ ಭೂಮಿ ಮಂಜೂರಾತಿ ಕೋರಿ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಕೈಸೇರಿದ ಕೇಂದ್ರ ಸಚಿವ ಎಚ್‌ಡಿಕೆ ಪತ್ರ

ಬೆಂಗಳೂರು, ಅ.22: ಮಂಡ್ಯ ಜಿಲ್ಲೆಯಲ್ಲಿ 'ನಿರ್ಮಾಣ ಮತ್ತು ಮೂಲಸೌಕರ್ಯ ಉಪಕರಣಗಳ ಪರೀಕ್ಷಾ ಕೇಂದ್ರ' (ಸಿಐಇ ಟೆಸ್ಟ್ ಸೆಂಟರ್ ಹಾಗೂ ಹಾಗೂ 'ಎಲೆಕ್ಟ್ರಿಕ್ ವಾಹನ ಪರೀಕ್ಷಾ ಕೇಂದ್ರ'(ಇವಿ ಟೆಸ್ಟಿಂಗ್ ಸೆಂಟರ್ – ಇವಿಟಿಸಿ) ಸ್ಥಾಪಿಸಲು ಕರ್ನಾಟಕ ಸರ್ಕಾರದಿಂದ ಕಳೆದ ಹತ್ತು ತಿಂಗಳಿನಿಂದ ಭೂಮಿ ಮಂಜೂರಾತಿಯಲ್ಲಿ ವಿಳಂಬವಾಗಿರುವ ಬಗ್ಗೆ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದು ಬೇಸರ ವ್ಯಕ್ತಪಡಿಸಿದ್ದಾರೆ.

ಕುಮಾರಸ್ವಾಮಿ ಅವರು ಗುರುವಾರ ಮುಖ್ಯಮಂತ್ರಿಗೆ ಪತ್ರ ಬರೆದಿದ್ದು, ಅದರಲ್ಲಿ ಈವರೆಗೆ ಕೈಗಾರಿಕೆ ಸ್ಥಾಪನೆ ಕುರಿತಂತೆ ನಡೆದಿರುವ ಸಭೆಗಳು, ರಾಜ್ಯ ಮತ್ತು ಕೇಂದ್ರ ನಡುವೆ ಆಗಿರುವ ಪತ್ರ ವ್ಯವಹಾರಗಳು, ವಿವಿಧ ಸಭೆಗಳ ನಡಾವಳಿ ಹಾಗೂ ಇನ್ನಿತರ ಮಹತ್ವದ ದಾಖಲೆಗಳನ್ನು ಲಗತ್ತಿಸಿ ಮುಖ್ಯಮಂತ್ರಿ ಕಚೇರಿಗೆ ಪತ್ರವನ್ನು ರವಾನಿಸಿದ್ದಾರೆ.

ಮಹತ್ವದ ಈ ಪತ್ರವನ್ನು ಕೇಂದ್ರ ಸಚಿವರ ಆಪ್ತರು ವಿಧಾನಸೌಧಕ್ಕೆ ತೆರಳಿ ಮುಖ್ಯಮಂತ್ರಿಗಳ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅವರಿಗೆ ಹಸ್ತಾಂತರಿಸಿದ್ದಾರೆ. ಪತ್ರ ತಲುಪಿದ ನಂತರ ಸ್ವತಃ ಹೆಚ್.ಡಿ. ಕುಮಾರಸ್ವಾಮಿ ಅವರು ತುಷಾರ್ ಗಿರಿನಾಥ್ ಅವರೊಂದಿಗೆ ಚರ್ಚಿಸಿದ್ದಾರೆ. ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ (ಎಆರ್‌ಎಐ) ವತಿಯಿಂದ ಪ್ರಸ್ತಾಪಿಸಲಾಗಿರುವ 'ನಿರ್ಮಾಣ ಮತ್ತು ಮೂಲಸೌಕರ್ಯ ಉಪಕರಣಗಳ ಪರೀಕ್ಷಾ ಕೇಂದ್ರ' ಹಾಗೂ 'ಎಲೆಕ್ಟ್ರಿಕ್ ವಾಹನ ಪರೀಕ್ಷಾ ಕೇಂದ್ರ' ಸ್ಥಾಪನೆಗಾಗಿ ಮಂಡ್ಯ ಜಿಲ್ಲೆಯಲ್ಲಿ ಭೂಮಿ ಮಂಜೂರು ಮಾಡುವಲ್ಲಿ ರಾಜ್ಯ ಸರ್ಕಾರದಿಂದ ಕಳೆದ 10 ತಿಂಗಳಿನಿಂದ ಉಂಟಾಗಿರುವ ನಿರಂತರ ವಿಳಂಬದ ಬಗ್ಗೆ ತಮ್ಮ ಗಮನ ಸೆಳೆಯಲು ಬಯಸುತ್ತೇನೆ.

ಈ ಬಗ್ಗೆ ರಾಜ್ಯ ಸರ್ಕಾರದ ಸಕಾರಾತ್ಮಕ ನಿರ್ಧಾರದ ನಿರೀಕ್ಷೆಯಲ್ಲಿದ್ದೇವೆ. ಸ್ಥಳ ಪರಿಶೀಲನೆ, ತಾಂತ್ರಿಕ ಮೌಲ್ಯಮಾಪನ ಹಾಗೂ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಭೆಗಳನ್ನು ನಡೆಸುವ ಮೂಲಕ ಈ ಪ್ರಕ್ರಿಯೆಯನ್ನು ಸಕ್ರಿಯವಾಗಿ ಮುಂದುವರಿಸುತ್ತಿದ್ದೇವೆ. ಇಷ್ಟೆಲ್ಲಾ ನಿರಂತರ ಪ್ರಯತ್ನಗಳ ಹೊರತಾಗಿಯೂ, ಸೂಕ್ತ ಭೂಮಿಯನ್ನು ಮಂಜೂರು ಮಾಡುವ ವಿಷಯವು ಜಿಲ್ಲಾಡಳಿತ ಮತ್ತು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಇನ್ನೂ ಭೂಮಿ ಮಂಜೂರಾತಿ ಇತ್ಯರ್ಥಗೊಂಡಿಲ್ಲ ಎಂಬ ಅಂಶವನ್ನು ತಮ್ಮ ಗಮನಕ್ಕೆ ತರಲು ಬಯಸುತ್ತೇನೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಯೋಜನೆ ಸಂಬಂಧ ಎಆರ್‌ಎಐ ತಂಡವು ಮಂಡ್ಯ ತಾಲೂಕಿನ ಬಸರಾಳು, ಮಂಡ್ಯ ಸಕ್ಕರೆ ಕಾರ್ಖಾನೆ ಮತ್ತು ಕೆ. ಆರ್.ಪೇಟೆ ಕೈಗಾರಿಕಾ ವಲಯದಲ್ಲಿನ ಸ್ಥಳಗಳಿಗೆ ಭೇಟಿನೀಡಿ ಪರಿಶೀಲಿಸಿದೆ. ತದನಂತರ ಭೂಮಿ ಮಂಜೂರಾತಿ ವಿಚಾರವಾಗಿ ಮಂಡ್ಯದ ಜಿಲ್ಲಾಧಿಕಾರಿಗಳನ್ನು ಭೇಟಿಯಾಗಿ ವಿಸ್ತೃತವಾಗಿ ಚರ್ಚಿಸಲಾಗಿದೆ. ಹಾಗೂ ಇದೇ ವಿಷಯವಾಗಿ ಇದೇ ವರ್ಷ ಮಾ.17ರಂದು ವಿಕಾಸಸೌಧದಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅವರೊಂದಿಗೂ ಸಭೆ ನಡೆಸಲಾಗಿದೆ. ಮತ್ತೆ ಮಾ.20ರಂದು ಭೂಮಿ ಮಂಜೂರಾತಿಗೆ ಸಂಬಂಧಿಸಿದಂತೆ ವಿವರವಾದ ತಾಂತ್ರಿಕ ಅಗತ್ಯಗಳ ಮಾಹಿತಿಯನ್ನು ಕೂಡ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗಿದೆ. ಹಾಗೂ ಏ.13ರಂದು ವಿಧಾನಸೌಧದಲ್ಲಿ ರಾಜ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವ ಎಂ.ಬಿ. ಪಾಟೀಲ್ ಅವರೊಂದಿಗೂ ಸಭೆ ನಡೆಸಿ ವಿವರವಾಗಿ ಚರ್ಚಿಸಿದ್ದೇನೆ ಎಂದು ಉಲ್ಲೇಖಿಸಿದ್ದಾರೆ.

ದೇಶದಲ್ಲಿವೆ ಬೆರಳೆಣಿಕೆಯಷ್ಟು ಕೇಂದ್ರಗಳು

ಎಆರ್‌ಎಐನಂತಹ ಕೇಂದ್ರಗಳು ರಾಷ್ಟ್ರದಲ್ಲಿ ಬೆರಳೆಣಿಕೆಯಷ್ಟು ಮಾತ್ರ ಇವೆ. ಮಹಾರಾಷ್ಟ್ರದ ಪುಣೆಯ ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ, ಹರಿಯಾಣದ ಮಾನೇಸರ್'ನಲ್ಲಿರುವ ಅಂತಾರಾಷ್ಟ್ರೀಯ ಆಟೋಮೋಟಿವ್ ತಂತ್ರಜ್ಞಾನ ಕೇಂದ್ರ, ಚೆನ್ನೈನಲ್ಲಿರುವ ಗ್ಲೋಬಲ್ ಆಟೋಮ್ಯಾಟಿವ್ ರಿಸರ್ಚ್ ಸೆಂಟರ್, ಕಾಶ್ಮೀರದಲ್ಲಿರುವ ರಾಷ್ಟ್ರೀಯ ಆಟೋಮೋಟಿವ್ ಟೆಸ್ಟ್ ಟ್ರ್ಯಾಕ್ಸ್ ಸಂಸ್ಥೆಗಳು ರಾಷ್ಟ್ರದಲ್ಲಿದ್ದು, ಈ ಕೇಂದ್ರಗಳ ಕೊಡುಗೆಯಿಂದ ಇಂದು ಹರಿಯಾಣ, ಮಹಾರಾಷ್ಟ್ರ, ತಮಿಳುನಾಡು ರಾಜ್ಯಗಳು ಆಟೋಮೊಬೈಲ್ ಕ್ಷೇತ್ರದಲ್ಲಿ ಮುಂಚೂಣಿ ರಾಜ್ಯಗಳಾಗಿ ಬೆಳೆದಿವೆ. ಹೀಗಾಗಿ ಇಂತಹ ಪ್ರತಿಷ್ಠಿತ ಕೇಂದ್ರಗಳು ನಮ್ಮ ಕರ್ನಾಟಕ ರಾಜ್ಯಕ್ಕೆ ಅಗತ್ಯವಾಗಿ ಬೇಕಾಗಿದೆ. ಯಾವುದೇ ಕಾರಣಕ್ಕೂ ARAI ಪರೀಕ್ಷಾ ಕೇಂದ್ರವನ್ನು ಕರ್ನಾಟಕ ಕಳೆದುಕೊಳ್ಳಬಾರದು ಎಂಬುದು ನನ್ನ ಕಳಕಳಿಯಾಗಿದೆ ಹಾಗೂ ರಾಜಕೀಯವನ್ನು ಮೀರಿ ಸಾರ್ವಜನಿಕ ಪ್ರಾಮುಖ್ಯ ಹೊಂದಿದ ಕೇಂದ್ರ ಸರ್ಕಾರಿ ಸ್ವಾಮ್ಯದ ಈ ಪ್ರತಿಷ್ಠಿತ ಸಂಸ್ಥೆಯನ್ನು ರಾಜ್ಯಕ್ಕೆ ಬರಮಾಡಿಕೊಳ್ಳ ಬೇಕಾಗಿರುವದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದಿದ್ದಾರೆ.

ಪ್ರಸ್ತಾಪಿತ ಯೋಜನೆಗೆ ಇಲ್ಲಿಯವರೆಗೆ ರಾಜ್ಯ ಸರ್ಕಾರದಿಂದ ಭೂ ಮಂಜೂರಾತಿಯಲ್ಲಿ ವಿಳಂಬವಾಗುತ್ತಿರುವುದು ಅತ್ಯಂತ ಕಳವಳಕಾರಿ ಸಂಗತಿಯಾಗಿದೆ. ಆದುದರಿಂದ ಎಆರ್‌ಎಐ ಕೇಂದ್ರಕ್ಕೆ ಅಗತ್ಯವಿರುವ ಭೂಮಿಯನ್ನು ಕೂಡಲೇ ಮಂಜೂರು ಮಾಡಬೇಕೆಂದು ಮತ್ತೊಮ್ಮೆ ಕೋರುತ್ತಿದ್ದೇನೆ ಎಂದು ಎಚ್.ಡಿ. ಕುಮಾರಸ್ವಾಮಿ ಪತ್ರದಲ್ಲಿ ತಿಳಿಸಿದ್ದಾರೆ.

ವಿಜಯೇಂದ್ರ ಜತೆ ಹೊಂದಾಣಿಕೆ ಮಾಡಿಕೊಳ್ಳುವ ಉದ್ದೇಶವಿಲ್ಲ: ಭೇಟಿ ವೇಳೆ ರಾಜಕೀಯ ಮಾತುಕತೆ ನಡೆದಿಲ್ಲ-ಯತ್ನಾಳ್ ಸ್ಪಷ್ಟನೆ

ಕರ್ನಾಟಕದ ನಾಯಕತ್ವ ಬದಲಾದರೆ ಬಿಜೆಪಿಗೆ ವಾಪಸ್: ಯತ್ನಾಳ್ ಷರತ್ತು

ವಿಜಯಪುರ, ಅ.22: ತಾವು ಬಿಜೆಪಿಗೆ ಮರಳಬೇಕಾದರೆ ಕರ್ನಾಟಕದ ನಾಯಕತ್ವದಲ್ಲಿ ಬದಲಾವಣೆಯಾಗಬೇಕು ಎಂದು ಉಚ್ಚಾಟಿತ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಷರತ್ತು ವಿಧಿಸಿದ್ದಾರೆ. ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರೊಂದಿಗೆ ಯಾವುದೇ ಹೊಂದಾಣಿಕೆ ಮಾಡಿಕೊಳ್ಳುವ ಉದ್ದೇಶ ತಮಗಿಲ್ಲ ಎಂದೂ ಸ್ಪಷ್ಟಪಡಿಸಿದ್ದಾರೆ. ಇತ್ತೀಚೆಗೆ ಈ ಇಬರೂ ನಾಯಕರು ಪರಸ್ಪರ ಭೇಟಿಯಾಗಿದ್ದು, ಇದು ಸಂಧಾನಕ್ಕೆ ಮತ್ತು ಯತ್ನಾಳ್ ಅವರು ಮತ್ತೆ ಬಿಜೆಪಿಗೆ ಸೇರ್ಪಡೆಗೊಳ್ಳಲು ದಾರಿ ಮಾಡಿಕೊಡಬಹುದು ಎಂಬ ಊಹಾಪೋಹಗಳು ಹರಿದಾಡುತ್ತಿದ್ದವು. ಆದರೆ, ಈ ವರದಿಗಳನ್ನು ತಳ್ಳಿಹಾಕಿರುವ ಯತ್ನಾಳ್, ತಮ್ಮ ಭೇಟಿಯಲ್ಲಿ ಯಾವುದೇ ರಾಜಕೀಯ ಮಾತುಕತೆಗಳು ನಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ತಾನು ಖಾಸಗಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲು ಹೋಗಿದ್ದಾಗ, ಒಬ್ಬರ ಮನೆಯಲ್ಲಿ ಆಹ್ವಾನದ ಮೇರೆಗೆ ಹೋಗಿದ್ದೆ ಎಂದು ಅವರು ವಿವರಿಸಿದರು. ತಾವು ಕಾಫಿ ಕುಡಿಯುತ್ತಿದ್ದಾಗ ವಿಜಯೇಂದ್ರ ಅಲ್ಲಿಗೆ ಬಂದರು ಮತ್ತು ಇಬ್ಬರೂ ಪರಸ್ಪರ ಕುಶಲೋಪರಿ ವಿಚಾರಿಸಿಕೊಂಡರು ಅಷ್ಟೇ. ಆ ಸಂಕ್ಷಿಪ್ತ ಭೇಟಿಯನ್ನು ಹೊರತುಪಡಿಸಿ, ತಮ್ಮ ನಡುವಿನ ಭಿನ್ನಾಭಿಪ್ರಾಯಗಳನ್ನು ಬಗೆಹರಿಸಿಕೊಳ್ಳುವ ಕುರಿತು ಯಾವುದೇ ಚರ್ಚೆ ನಡೆದಿಲ್ಲ ಎಂದು ಹೇಳಿದರು. ವಿಜಯೇಂದ್ರ ಅವರು ತಮಗೆ ವೈಯಕ್ತಿಕವಾಗಿ ಮತ್ತು ರಾಜಕೀಯವಾಗಿ ಸಾಕಷ್ಟು ಹಾನ

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಅಕ್ಟೋಬರ್ 23, 2026, ಶುಕ್ರವಾರ

ಒಳಪುಟಗಳಲ್ಲಿ

ಎಪ್‌ಸ್ಟೀನ್ ಫೋಟೊ ಬಾಂಬ್: ಮೋದಿ-ಪುರಿ ವಿರುದ್ಧ ವಾಗ್ದಾಳಿ - ಪು.4

ಬಿಕ್ಕಟ್ಟು ನಿಭಾಯಿಸಲು ಉಂಟಾದ ಹೆಚ್ಚುವರಿ ವೆಚ್ಚ ಸರಿದೂಗಿಸಲು ಇಂಧನ ಇಲಾಖೆ ಕ್ರಮ ನವೆಂಬರ್‌ನಿಂದ ಪ್ರತಿ ಯೂನಿಟ್ ವಿದ್ಯುತ್‌ಗೆ 50 ಪೈಸೆ ಏರಿಕೆ ಸಾಧ್ಯತೆ?- ಪು.5

ಮೇಲ್ಮನೆ 4 ಸ್ಥಾನಗಳಿಗೆ ಇಂದು ಚುನಾವಣೆ: ಮತದಾನಕ್ಕೆ ಸಕಲ ಸಿದ್ಧತೆ

ಬೆಂಗಳೂರು, ಅ.22: ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷಗಳ ನಡುವಿನ ಪ್ರತಿಷ್ಠೆಯ ಕಣವಾಗಿರುವ ವಿಧಾನ ಪರಿಷತ್ತಿನ ಎರಡು ಶಿಕ್ಷಕರ ಹಾಗೂ ಎರಡು ಪದವೀಧರ ಕ್ಷೇತ್ರಗಳ ಚುನಾವಣೆಯ ಮತದಾನ ಶುಕ್ರವಾರ ನಡೆಯಲಿದ್ದು, ಚುನಾವಣಾ ಆಯೋಗ ಸಕಲ ರೀತಿಯಲ್ಲಿ ಸಜ್ಜಾಗಿದೆ.

ಬೆಂಗಳೂರು ಶಿಕ್ಷಕರ, ಈಶಾನ್ಯ ಶಿಕ್ಷಕರ, ಪಶ್ಚಿಮ ಪದವೀಧರ ಹಾಗೂ ಆಗ್ನೇಯ ಪದವೀಧರ ಕ್ಷೇತ್ರಗಳ ವ್ಯಾಪ್ತಿಯ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿನ ಮತಗಟ್ಟೆಗಳಲ್ಲಿ ಶುಕ್ರವಾರ ಬೆಳಿಗ್ಗೆ 8 ರಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದೆ. ಶಿಕ್ಷಕ ಹಾಗೂ ಪದವೀಧರ ಮತದಾರರು ಒಟ್ಟು 43 ಅಭ್ಯರ್ಥಿಗಳ ಭವಿಷ್ಯವನ್ನು ಶುಕ್ರವಾರ ಬರೆಯಲಿದ್ದಾರೆ.

ಲೋಕಸಭೆ ಚುನಾವಣೆಯಂತೆ ವಿಧಾನ ಪರಿಷತ್ತಿನ ಈ ಚುನಾವಣೆಯಲ್ಲೂ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದು, ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಜೆಡಿಎಸ್ ಅಭ್ಯರ್ಥಿ ಸ್ಪರ್ಧಿಸಿದ್ದರೆ, ಉಳಿದ ಮೂರು ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ.

ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ.ಗೌಡ, ಸಂಕನೂರ ಎಸ್.ವಿ., ಶಶೀಲ್ ಜಿ.ನಮೋಶಿ, ಪುಟ್ಟಣ್ಣ ಅವರು ನವೆಂಬರ್ 11ರಂದು ವಿಧಾನ ಪರಿಷತ್ ಸದಸ್ಯ ಸ್ಥಾನದಿಂದ ನಿವೃತ್ತಿಯಾಗಲಿದ್ದು, ಇವರ ನಿವೃತ್ತಿಯಿಂದ ತೆರವಾಗುವ ಸ್ಥಾನಗಳಿಗೆ ಚುನಾವಣಾ ಆಯೋಗ ಚುನಾವಣೆ ನಡೆಸುತ್ತಿದೆ. ಅಕ್ಟೋಬರ್ 31ರೊಳಗೆ ಚುನಾವಣಾ ಪ್ರಕ್ರಿಯೆ ಮುಕ್ತಾಯವಾಗಲಿದ್ದು, ಚುನಾವಣಾ ನೀತಿ ಸಂಹಿತೆಯು ಅಂತ್ಯಗೊಳ್ಳಲಿದೆ.

ಅಭ್ಯರ್ಥಿಗಳು ಯಾರು?: ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಮಾಜಿ ಉಪ ಸಭಾಪತಿ ಪುಟ್ಟಣ್ಣ, ಜೆಡಿಎಸ್‌ನಿಂದ ಎ.ಪಿ.ರಂಗನಾಥ ಸೇರಿದಂತೆ ಒಟ್ಟು ಆರು ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ. ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಶರಣಪ್ಪ ಮಟ್ಟೂರು, ಬಿಜೆಪಿಯಿಂದ ಶಶೀಲ್ ಜಿ.ನಮೋಶಿ ಸೇರಿದಂತೆ ಒಟ್ಟು 13 ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ. ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಶಶಿ ಹುಲಿಕುಂಟಿಮಠ್, ಬಿಜೆಪಿಯಿಂದ ಕೆ.ಎಂ.ಸುರೇಶ ಅವರು ಸೇರಿದಂತೆ 10 ಅಭ್ಯರ್ಥಿಗಳು ಸ್ಪರ್ಧೆಯಲ್ಲಿದ್ದಾರೆ. ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಮೋಹನ ಲಿಂಬಿಕಾಯಿ, ಬಿಜೆಪಿಯಿಂದ ಸಂಕನೂರ ಎಸ್.ವಿ. ಸೇರಿದಂತೆ ಒಟ್ಟು 14 ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದಾರೆ. ಪದವೀಧರ ಮತ್ತು ಶಿಕ್ಷಕ ಮತದಾರರು ಈ ಚುನಾವಣೆಯಲ್ಲಿ ಪ್ರಾಶಸ್ತ್ಯದ ಮತ ಚಲಾವಣೆ ಮಾಡಬೇಕಾಗಿದೆ. ಅ.27ರಂದು ನಾಲ್ಕು ಕ್ಷೇತ್ರಗಳ ಮತ ಎಣಿಕೆ ನಡೆಯಲಿದ್ದು, ಅಂದು ಸಂಜೆ ವೇಳೆಗೆ ಫಲಿತಾಂಶ ಪ್ರಕಟವಾಗುವ ನಿರೀಕ್ಷೆಯಿದೆ.

ಶರಾವತಿ ಪಂಪ್ಡ್ ಸ್ಟೋರೇಜ್, ಮೇಕೆದಾಟು ಯೋಜನೆಗೆ ಅನುಮೋದನೆ ನೀಡಿ

ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್‌ಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ



ನವದೆಹಲಿ, ಅ.22: ಕರ್ನಾಟಕದ ಪ್ರಮುಖ ಯೋಜನೆಗಳಾದ ಶರಾವತಿ ಪಂಪ್ಡ್ ಸ್ಟೋರೇಜ್ ಹಾಗೂ ಮೇಕೆದಾಟು ಯೋಜನೆಗಳಿಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿ ಸ್ಥಾಯಿ ಸಮಿತಿ ಅನುಮೋದನೆ ನೀಡಬೇಕು ಹಾಗೂ ಕಸ್ತೂರಿ ರಂಗನ್ ವರದಿ ವಿಚಾರವಾಗಿ ಭೌತಿಕ ಸಮೀಕ್ಷೆ ಪೂರ್ಣಗೊಳ್ಳುವವರೆಗೆ ಕರಡು ಅಧಿಸೂಚನೆ ಅಂತಿಮಗೊಳಿಸುವುದು ಬೇಡ ಎಂದು ಸಿಎಂ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ.

ನವದೆಹಲಿಯ ಪರಿಸರ ಭವನದಲ್ಲಿ ಶಿವಕುಮಾರ್ ಅವರು ಕೇಂದ್ರ ಪರಿಸರ, ಅರಣ್ಯ ಸಚಿವ ಭೂಪೇಂದರ್ ಯಾದವ್ ಅವರನ್ನು ಗುರುವಾರ ಭೇಟಿ ಮಾಡಿ ಚರ್ಚಿಸಿ, ರಾಜ್ಯದ ಯೋಜನೆಗಳ ಕುರಿತು ಮನವಿ ಸಲ್ಲಿಸಿದರು. ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಯ ಪ್ರಸ್ತಾಪ ಕುರಿತು ಕೊನೆಯ ಬಾರಿಗೆ 28 ಫೆಬ್ರವರಿ 2026 ರಂದು ನಡೆದ ಎಸ್‌ಸಿ–ಎನ್‌ಬಿಡಬ್ಲ್ಯುಎಲ್ 89ನೇ ಸಭೆಯಲ್ಲಿ ಚರ್ಚಿಸಲಾಯಿತು. ತಾಂತ್ರಿಕ ಸಮಿತಿಯು ಎತ್ತಿದ ಅಂಶಗಳಿಗೆ ಸ್ಪಷ್ಟೀಕರಣ ಹಾಗೂ ಎನ್‌ಐಎಎಸ್‌ನಿಂದ ತಾಂತ್ರಿಕ ವರದಿಯನ್ನು ಸಲ್ಲಿಸುವಂತೆ ರಾಜ್ಯ/ಬಳಕೆದಾರ ಸಂಸ್ಥೆಗೆ ಸೂಚಿಸಲಾಗಿತ್ತು. ಈ ಸಂಬಂಧ ಬೆಂಗಳೂರಿನ 'ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಅಡ್ವಾನ್ಸ್ಡ್ ಸ್ಟಡೀಸ್ (ಎನ್‌ಐಎಎಸ್) ವರದಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸುವುದರ ಜೊತೆಗೆ, ಸ್ಥಾಯಿ ಸಮಿತಿಯು ಎತ್ತಿದ ಪ್ರಶ್ನೆಗಳಿಗೆ ಕರ್ನಾಟಕ ಸರ್ಕಾರವು ಸೂಕ್ತ ಉತ್ತರಗಳನ್ನು ನೀಡಿದೆ" ಎಂದು ವಿವರಿಸಿದರು.

ಮೇಕೆದಾಟು ಸಮತೋಲನ ಜಲಾಶಯ ಮತ್ತು ಕುಡಿಯುವ ನೀರಿನ ಯೋಜನೆ: ಮೇಕೆದಾಟು ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ ಭೂ–ತಾಂತ್ರಿಕ ಸಮೀಕ್ಷೆಗಾಗಿ ಕಾವೇರಿ ವನ್ಯಜೀವಿ ಅಭಯಾರಣ್ಯದಲ್ಲಿ ಒಟ್ಟು 0.0000352 ಹೆಕ್ಟೇರ್ ಪ್ರದೇಶದಲ್ಲಿ 20 ಬೋರ್ ಹೋಲ್‌ಗಳನ್ನು ಕೊರೆಯಲು ಅನುಮತಿ ಕೋರುವ ಈ ಪ್ರಸ್ತಾಪವನ್ನು ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿ ಪರಿಶೀಲನೆಗಾಗಿ 1 ಜುಲೈ 2026 ರಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯಕ್ಕೆ ಸಲ್ಲಿಸಲಾಗಿತ್ತು.

ಇತ್ತೀಚೆಗೆ, ಈ ವಿಷಯಕ್ಕೆ ಸಂಬಂಧಿಸಿದಂತೆ ಸರ್ವೋಚ್ಚ ನ್ಯಾಯಾಲಯದ ಮುಂದೆ ಬಾಕಿ ಇರುವ ವಿವಿಧ ಅರ್ಜಿಗಳ ಸ್ಥಿತಿಗತಿಗೆ ಸಂಬಂಧಿಸಿದಂತೆ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯವು ಅಗತ್ಯ ದಾಖಲೆ/ಮಾಹಿತಿಯನ್ನು ಕೋರಿದ್ದು, ಅದನ್ನು ಶೀಘ್ರದಲ್ಲೇ ಒದಗಿಸಲಾಗುವುದು. ಆದರೆ, ಈ ಪ್ರಸ್ತಾಪವು ಕೇವಲ ಸಮೀಕ್ಷೆ ಮತ್ತು ತನಿಖಾ ಚಟುವಟಿಕೆಗಳಿಗೆ ಮಾತ್ರ ಸಂಬಂಧಿಸಿದ್ದು, ಪ್ರಸ್ತುತ ಯಾವುದೇ ಸಂರಕ್ಷಿತ ಪ್ರದೇಶದ ಭೂಮಿಯನ್ನು ಯೋಜನೆಗೆ ಬಳಸಿಕೊಳ್ಳಲು (ಜುತಜಡಿಯಟ) ಕೋರುತ್ತಿಲ್ಲ" ಎಂದು ವಿವರಿಸಿದ್ದಾರೆ. ಹಾಗೂ ಈ ನಿಟ್ಟಿನಲ್ಲಿ, ಎನ್‌ಬಿಡಬ್ಲ್ಯುಎಲ್ ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿ, ಮೇಲ್ಕಂಡ ಎರಡು ಪ್ರಸ್ತಾಪಗಳನ್ನು ಶೀಘ್ರವಾಗಿ ಪರಿಶೀಲಿಸಿ ಶಿಫಾರಸು ಮಾಡಬೇಕು" ಎಂದು ಮನವಿ ಮಾಡಿದರು.

ಕಸ್ತೂರಿರಂಗನ್ ವರದಿ; ಭೌತಿಕ ಸಮೀಕ್ಷೆ ಪೂರ್ಣಗೊಳ್ಳುವವರೆಗೆ 7ನೇ ಕರಡು ಅಧಿಸೂಚನೆ ಅಂತಿಮ ಬೇಡ

ಕಸ್ತೂರಿರಂಗನ್ ವರದಿಯ ಆಧಾರದ ಮೇಲೆ ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ಪ್ರದೇಶ ಘೋಷಣೆಗೆ ಸಂಬಂಧಿಸಿದಂತೆ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಇಲಾಖೆಯು ಹೊರಡಿಸಿರುವ 27 ಜುಲೈ 2026ರ 7ನೇ ಕರಡು ಅಧಿಸೂಚನೆಯನ್ನು ಅಂತಿಮಗೊಳಿಸದಂತೆ ಕೋರಿ ದಿನಾಂಕ: 25–09–2026 ರ ಪತ್ರದ ಮೂಲಕ ಪ್ರಧಾನ ಮಂತ್ರಿಗಳಿಗೂ ಮನವಿ ಮಾಡಲಾಗಿದೆ. ರಾಜ್ಯ ಸರ್ಕಾರ ರಚಿಸಿರುವ ಉನ್ನತ ಮಟ್ಟದ ಸಮಿತಿಯ ವರದಿ ಸಲ್ಲಿಕೆಯಾಗಿ, ಒಂದು ವರ್ಷದ ಅವಧಿಯಲ್ಲಿ ಭೌತಿಕ ಸಮೀಕ್ಷೆ ಪೂರ್ಣಗೊಳ್ಳುವವರೆಗೆ ಇದನ್ನು ಅಂತಿಮಗೊಳಿಸಬಾರದು ಮತ್ತು ರಾಜ್ಯ ಸರ್ಕಾರದ ಸಮಾಲೋಚನೆಯೊಂದಿಗೆ ಕ್ರೇಂದ್ರ ಸರ್ಕಾರವು ಮುಂದಿನ ಕ್ರಮಗಳನ್ನು ಕೈಗೊಳ್ಳಬಹುದು ಎಂದು ಸಚಿವರಿಗೆ ಸಿಎಂ ಡಿ.ಕೆ. ಶಿವಕುಮಾರ್ ಕೋರಿದರು. ಬೆಳಗಾವಿಯ ಎಕೊ ಕೇನ್ ಶುಗರ್ ಅಂಡ್ ಎನರ್ಜಿ ಸಕ್ಕರೆ ಕಾರ್ಖಾನೆಯು 2016ಕ್ಕೂ ಮೊದಲು ಪ್ರಾರಂಭವಾಗಿರುವುದರಿಂದ ಪರಿಸರ ಸೂಕ್ಷ್ಮ ವಲಯದ ವ್ಯಾಪ್ತಿಗೆ ಬರುವುದಿಲ್ಲ. ಈ ಸಕ್ಕರೆ ಕಾರ್ಖಾನೆಯಲ್ಲಿ ಸುಮಾರು 500 ಕೆಲಸಗಾರರು ಕಾರ್ಯನಿರ್ವಹಿಸುತ್ತಿದ್ದು, ಸುಮಾರು 5000 ಕುಟುಂಬಗಳು ಈ ಕಾರ್ಖಾನೆಯನ್ನು ಅವಲಂಬಿಸಿವೆ. ಆದ್ದರಿಂದ ಈ ಸಕ್ಕರೆ ಕಾರ್ಖಾನೆಯನ್ನು ಪರಿಸರ ಸೂಕ್ಷ್ಮ ವಲಯದಿಂದ ಕೈಬಿಡಬೇಕು ಎಂದು ಡಿ.ಕೆ. ಶಿವಕುಮಾರ್ ಮನವಿ ಮಾಡಿದರು.

ವರಿಷ್ಠರ ಭೇಟಿ ಮಾಡಿದ ಡಿ.ಕೆ. ಶಿವಕುಮಾರ್

ನವದೆಹಲಿ, ಅ.22: ಮುಖ್ಯಮಂತ್ರಿ ಸಿಎಂ. ಡಿ.ಕೆ. ಶಿವಕುಮಾರ್ ಅವರು ನವದೆಹಲಿಯಲ್ಲಿ ಗುರುವಾರದಂದು ಪಕ್ಷದ ವರಿಷ್ಠರನ್ನು ಭೇಟಿ ಮಾಡಿ ರಾಜ್ಯದ ಪಕ್ಷದ ವಿಷಯಗಳ ಬಗ್ಗೆ ಚರ್ಚೆ ನಡೆಸಿದರು. ಕೆ.ಸಿ. ವೇಣುಗೋಪಾಲ್ ಅವರನ್ನು ಭೇಟಿ ಮಾಡಿದ್ದ ಅವರು, ರಾಜ್ಯದ ನಿಗಮ – ಮಂಡಳಿ ಅಧ್ಯಕ್ಷರ ನೇಮಕದ ಬಗ್ಗೆ ಸವಿವರವಾಗಿ ಚರ್ಚೆ ನಡೆಸಿದರು. ಪ್ರಮುಖವಾಗಿ ಕರ್ನಾಟಕ ಸಂಪುಟದಲ್ಲಿ ಖಾಲಿ ಇರುವ ಎರಡು ಸಚಿವ ಸ್ಥಾನಗಳನ್ನು ಭರ್ತಿ ಮಾಡುವ ಬಗ್ಗೆಯೂ ಚರ್ಚೆ ನಡೆಸಿದರು ಎನ್ನಲಾಗಿದೆ. ಉಳಿದಂತೆ ರಾಜ್ಯದ ಯೋಜನೆಗಳ ಬಗ್ಗೆ ಕೇಂದ್ರ ಸರ್ಕಾರದ ಸಚಿವರನ್ನು ಭೇಟಿ ಮಾಡಿ ಮಹತ್ವದ ಚರ್ಚೆ ನಡೆಸಿದರು ಎನ್ನಲಾಗಿದೆ.

ದೆಹಲಿಗೆ ಭೇಟಿ ನೀಡಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರನ್ನು ಗುರುವಾರ ಭೇಟಿ ಮಾಡಿ ಕರ್ನಾಟಕದ ದೂರಸಂಪರ್ಕ ಮತ್ತು ಡಿಜಿಟಲ್ ಸಂಪರ್ಕ ಕ್ಷೇತ್ರದಲ್ಲಿ ಸಹಕಾರದ ಬಗ್ಗೆ ಚರ್ಚೆ ನಡೆಸಿದರು.

ಇಂದು ಅಶೋಕ್‌ರಿಂದ ಗೃಹ ಸಚಿವ ಅಮಿತ್‌ಶಾ ಭೇಟಿ

ನವದೆಹಲಿ, ಅ.22: ಕರ್ನಾಟಕ ವಿಧಾನಸಭೆ ಪ್ರತಿಪಕ್ಷ ನಾಯಕ ಹಾಗೂ ಬಿಜೆಪಿ ಮುಖಂಡ ಆರ್.ಅಶೋಕ್ ಅವರು ಕೇಂದ್ರ ಗೃಹ ಸಚಿವ ಅಮಿತ್‌ಶಾ ಅವರನ್ನು ದೆಹಲಿಯಲ್ಲಿ ಶುಕ್ರವಾರ ಭೇಟಿ ಮಾಡಿ ರಾಜ್ಯದ ಪಕ್ಷದ ವಿದ್ಯಮಾನಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ.

ನಂತರ ಪಕ್ಷದ ಇತರ ವರಿಷ್ಠರು ಹಾಗೂ ರಾಜ್ಯವನ್ನು ಪ್ರತಿನಿಧಿಸುವ ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ, ಪ್ರಲ್ಹಾದ್ ಜೋಶಿ, ವಿ. ಸೋಮಣ್ಣ, ಶೋಭಾ ಕರಂದ್ಲಾಜೆ ಅವರನ್ನು ಭೇಟಿ ಮಾಡಲಿರುವ ಅವರು, ಕರ್ನಾಟಕ ರಾಜ್ಯದ ರಾಜಕೀಯ ವಿದ್ಯಮಾನಗಳ ಬಗ್ಗೆ ಚರ್ಚಿಸಲಿದ್ದಾರೆ.

ಅ.26ರಂದು ಬೆಳಗಾವಿಯಲ್ಲಿ ಕಬ್ಬು ಬೆಳೆಗಾರರ ಸಭೆ: ಡಿ.ಕೆ.ಶಿವಕುಮಾರ್

ಬೆಂಗಳೂರು, ಅ.22: ಅಕ್ಟೋಬರ್ 26ರಂದು ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆ ಮಾಲೀಕರ ಸಭೆ ಬೆಳಗಾವಿಯಲ್ಲಿ ನಿಗದಿಯಾಗಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಕಾರಣಾಂತರಗಳಿಂದ ಭಾಗವಹಿಸುತ್ತಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ದೆಹಲಿಗೆ ತೆರಳುವ ಮುನ್ನ ಸದಾಶಿವನಗರದ ನಿವಾಸದ ಬಳಿ ಗುರುವಾರ ಮಾಧ್ಯಮಗಳ ಜತೆ ಮಾತನಾಡಿ, ಸಭೆಯನ್ನು ಮೊದಲು ನೀವು ಮಾಡಿ, ನಂತರ ನಾವು ಸಭೆ ಮಾಡುತ್ತೇವೆ ಎಂದು ಜೋಶಿ ಹೇಳಿದ್ದಾರೆ. ಕಬ್ಬು ಬೆಳೆಗಾರರ ಸಮಸ್ಯೆ ಕೇವಲ ಕರ್ನಾಟಕದ ಮಾತ್ರವಲ್ಲದೆ ಇಡೀ ದೇಶಕ್ಕೆ ಸಂಬಂಧಿಸಿದ ವಿಚಾರ. ಈ ಕುರಿತು ಕೇಂದ್ರ ಮಟ್ಟದಲ್ಲಿ ಅಧಿಕಾರಿಗಳ ಜೊತೆ ಪ್ರತ್ಯೇಕ ಸಭೆ ನಡೆಸಿ ಪರಿಹಾರ ಕಂಡುಕೊಳ್ಳಲಾಗುವುದು ಎಂದರು. ಐಟಿ ವಿಚಾರಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರ ಜತೆಯೂ ಡಿ.ಕೆ. ಶಿವಕುಮಾರ್ ಚರ್ಚಿಸಿದರು.

ಪೋಲೆಂಡ್ ಪ್ರಧಾನಿ ಶುಕ್ರವಾರ ಭೇಟಿ ನೀಡುವ ಕಾರಣಕ್ಕೆ ರಾಜ್ಯಕ್ಕೆ ತೆರಳಲಿದ್ದೇನೆ. ರಾಜ್ಯದ ವಿಚಾರಗಳ ಚರ್ಚೆಗೆ ಸೂಕ್ತ ದಿನದಂದು ದೆಹಲಿಗೆ ಭೇಟಿ ನೀಡುವೆ ಎಂದರು.

ಪ್ರಧಾನಿ, ಗೃಹ ಸಚಿವರ ಭೇಟಿ

ಅರಣ್ಯ ಭೂಮಿ ವಿವಾದಗಳಿಗೆ ಸಂಬಂಧಪಟ್ಟ ಕೇಂದ್ರ ಸಚಿವರ ಜೊತೆ ಚರ್ಚೆ ನಡೆಸಲಾಗುತ್ತದೆ. ಗೋವಾದಲ್ಲಿ ಚುನಾವಣೆ ಇರುವ ಕಾರಣ ಮಹದಾಯಿ ಕುರಿತು ತೀರ್ಮಾನ ಕೈಗೊಳ್ಳುವುದು ಸ್ವಲ್ಪ ಕಷ್ಟವಾಗಬಹುದು. ತುಂಗಭದ್ರಾ ನೀರಿನ ವಿಚಾರವಾಗಿ ಆಂಧ್ರಪ್ರದೇಶದ ಮುಖ್ಯಮಂತ್ರಿಗಳೊಂದಿಗೆ ಪರಸ್ಪರ ಭೇಟಿಯಾಗಿ ಚರ್ಚಿಸಲು ಮನವಿ ಮಾಡಲಾಗಿದೆ. ಆಂಧ್ರ ಅಥವಾ ದೆಹಲಿಯಲ್ಲಿ ಈ ಭೇಟಿ ನಡೆಸಲಾಗುವುದು. ತುಂಗಭದ್ರಾ ಜಲಾಶಯದಲ್ಲಿ ನೀರಿನ ಕೊರತೆ ತೀವ್ರವಾಗಿದ್ದು, ರೈತರಿಂದ ನೀರಿನ ಬೇಡಿಕೆ ವಿಪರೀತವಾಗಿದೆ. ಮಳೆಯಿಲ್ಲದ ಕಾರಣ ಮುಂದಿನ ಕಾರ್ಯತಂತ್ರ ರೂಪಿಸಬೇಕಿದೆ. ಬರಗಾಲದ ಕುರಿತು ರಾಜ್ಯದ ಬೇಡಿಕೆಗಳನ್ನು ಸಲ್ಲಿಸಲು ಪ್ರಧಾನಮಂತ್ರಿ ಹಾಗೂ ಗೃಹಸಚಿವರನ್ನು ಭೇಟಿ ಮಾಡಿ ಚರ್ಚಿಸಲಾಗುವುದು. ಈ ವಿಚಾರಗಳ ಚರ್ಚೆಗೆ ಪ್ರತ್ಯೇಕ ತಂಡಗಳನ್ನು ರಚಿಸಲಾಗಿದೆ. ಅಧಿಕಾರಿಗಳನ್ನೂ ನಿಯೋಜಿಸಲಾಗಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

ಸಕ್ಕರೆ ವಲಯಕ್ಕೆ ಶೀಘ್ರ ಹೊಸ ಮಾರ್ಗಸೂಚಿ

ನವದೆಹಲಿ, ಅ.22: ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ರಚಿಸಿದ್ದ ಜಂಟಿ ಸಮಿತಿ ನವದೆಹಲಿಯಲ್ಲಿ ವಿಜಯದಶಮಿ ದಿನ ತನ್ನ ಮೊದಲ ಸಭೆ ನಡೆಸಿದ್ದು, ಶೀಘ್ರವೇ ಸಕ್ಕರೆ ವಲಯದ ಹೊಸ ಮಾರ್ಗಸೂಚಿ ರೂಪಿಸಲು ಮುಂದಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕಚೇರಿ ಪ್ರಕಟಣೆ ತಿಳಿಸಿದೆ.

ಕಬ್ಬು ಬೆಳೆಗಾರರ ಸಮಸ್ಯೆಗೆ ಪರಿಹಾರ ಕಲ್ಪಿಸಲು ರಚಿಸಿದ್ದ ಜಂಟಿ ಸಮಿತಿ ಮೊದಲ ಸಭೆ

ರಮೇಶ್‌ಚಂದ್ರ ಅಧ್ಯಕ್ಷತೆಯ ಜಂಟಿ ಸಮಿತಿಯು ಬುಧವಾರ ಮೊದಲ ಸಭೆ ನಡೆಸಿದೆ. ರಾಜ್ಯ ಸರ್ಕಾರಗಳು, ಸಕ್ಕರೆ ಕಾರ್ಖಾನೆಗಳು, ಕಬ್ಬು ಬೆಳೆಗಾರರು ಮತ್ತು ಕೃಷಿ ವಿಜ್ಞಾನಿಗಳೊಂದಿಗೆ ಅಗತ್ಯ ಸಮಾಲೋಚನೆ ನಡೆಸಲು ನಿರ್ಧರಿಸಿದೆ.

ಕಬ್ಬು ಬೆಳೆಗಾರರ ಸಮಸ್ಯೆಗಳು ಸೇರಿದಂತೆ ಸಮಗ್ರ ಸಕ್ಕರೆ ವಲಯದ ಸಾಧಕ – ಬಾಧಕಗಳ ಕುರಿತು ಸಮಾಲೋಚನೆಗೆ ಕಬ್ಬು ಬೆಳೆಗಾರರು, ಸಕ್ಕರೆ ಕಾರ್ಖಾನೆಗಳ ಸಂಘಗಳು, ಒಕ್ಕೂಟಗಳು, ಸಕ್ಕರೆ ಮತ್ತು ಕಬ್ಬು ಕ್ಷೇತ್ರದ ಪ್ರಮುಖ ಸಂಶೋಧನಾ ಸಂಸ್ಥೆಗಳನ್ನು ಸಹ ತೊಡಗಿಸಿಕೊಳ್ಳಲು ಸಮಿತಿ ತೀರ್ಮಾನಿಸಿದೆ.

ಕರ್ನಾಟಕ, ಮಹಾರಾಷ್ಟ್ರ, ಉತ್ತರಪ್ರದೇಶ, ಹರಿಯಾಣ ಸೇರಿ ಕಬ್ಬು ಬೆಳೆಯುವ ಪ್ರದೇಶಗಳ ವಿಜ್ಞಾನಿಗಳು, ಸಂಶೋಧಕರು ಹಾಗೂ ಕೃಷಿ ವಿಶ್ವವಿದ್ಯಾಲಯಗಳ ಪ್ರತಿನಿಧಿಗಳನ್ನೂ ಸಮಾಲೋಚನಾ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳಲು ನಿರ್ಧರಿಸಿದ್ದು, ಶೀಘ್ರದಲ್ಲೇ ಜಂಟಿ ಸಮಿತಿ ಕಾರ್ಯ ಆರಂಭವಾಗಲಿದೆ.

ವೈಜ್ಞಾನಿಕ ಸಲಹೆ–ಸೂಚನೆಗಳನ್ನು ಸ್ವೀಕರಿಸುವ ಸಮಿತಿ ಸಕ್ಕರೆ ವಲಯದ ಸಮಗ್ರ ಮತ್ತು ಸುಸ್ಥಿರ ಅಭಿವ

ಎಸ್‌ಐಆರ್ ವಿರುದ್ಧ ಇಂದು ರಾಷ್ಟ್ರವ್ಯಾಪಿ ಪ್ರತಿಭಟನೆ

ನವದೆಹಲಿ, ಅ. 22: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ವಿರೋಧಿಸಿ ಅ.23ರಂದು ನಡೆಯಲಿರುವ ರಾಷ್ಟ್ರವ್ಯಾಪಿ ಪ್ರತಿಭಟನೆಯಲ್ಲಿ ಖ್ಯಾತ ಅರ್ಥಶಾಸ್ತ್ರಜ್ಞ ಪರಕಾಲ ಪ್ರಭಾಕರ್, ಕಾಕ್ರೋಚ್ ಜನತಾ ಪಕ್ಷ (ಸಿಜೆಪಿ) ನಾಯಕ ಅಭಿಜೀತ್ ದೀಪ್ಕೆ ಹಾಗೂ ನಟ, ಸಾಮಾಜಿಕ ಹೋರಾಟಗಾರ ಪ್ರಕಾಶ್ ರಾಜ್ ಪಾಲ್ಗೊಳ್ಳುವ ನಿರೀಕ್ಷೆಯಿದೆ.

ಪೀಪಲ್ ಅಗೇನ್ಸ್ಟ್ ಎಸ್‌ಐಆರ್ ಮೈತ್ರಿಕೂಟದ ನೇತೃತ್ವದಲ್ಲಿ ಈ ಪ್ರತಿಭಟನೆ ಆಯೋಜಿಸಲಾಗುತ್ತಿದೆ. ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು ಮತ್ತು ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಎಂಬುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿದೆ.

ಸರ್ಕಾರದ ಆರ್ಥಿಕ ನೀತಿಗಳ ಕುರಿತು ನಿರಂತರವಾಗಿ ಟೀಕೆ ಮಾಡುತ್ತಾ ಬಂದಿರುವ ಪರಕಾಲ ಪ್ರಭಾಕರ್, ಸಾಮಾಜಿಕ ಜಾಲತಾಣದಲ್ಲಿ ಪ್ರತಿಭಟನೆಗೆ ಬೆಂಬಲ ಸೂಚಿಸಿದ್ದಾರೆ.

ಪ್ರತಿ ಗಲ್ಲಿಯಲ್ಲೂ ಜಂತರ್ ಮಂತರ್!

ಶುಕ್ರವಾರ ಪ್ರಜಾಪ್ರಭುತ್ವವನ್ನು ಮರುಸ್ಥಾಪಿಸಲು ಜನರ ಮೆರವಣಿಗೆ. ಸವಾಲನ್ನು ಎದುರಿಸಲು ನಾವೆಲ್ಲರೂ ಎದ್ದು ನಿಲ್ಲೋಣ ಎಂದು ಅವರು ಪೋಸ್ಟ್ ಮಾಡಿದ್ದಾರೆ.

ಪ್ರತಿಭಟನೆಯಲ್ಲಿ ಹಿರಿಯ ವಕೀಲ ಪ್ರಶಾಂತ್ ಭೂಷಣ್, ರೈತ ನಾಯಕ ರಾಕೇಶ್ ಟಿಕಾಯತ್, ವಿದ್ಯಾರ್ಥಿ ನಾಯಕಿ ನೇಹಾ ಬೋರಾ ಹಾಗೂ ಲೇಖಕ ತುಷಾರ್ ಗಾಂಧಿ ಸೇರಿದಂತೆ ಹಲವು ಗಣ್ಯರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಪ್ರತಿಭಟನೆಗೆ ಕೈಜೋಡಿಸುವಂತೆ ಇಂಡಿಯಾ ಮೈತ್ರಿಕೂಟದ ಪಕ್ಷಗಳಿಗೂ ಸಂಘಟಕರು ಮನವಿ ಮಾಡಿದ್ದಾರೆ. ಅಕ್ಟೋಬರ್ 8ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಿಜೆಪಿ ಆಯೋಜಿಸಿದ್ದ ಪ್ರತಿಭಟನೆಯಲ್ಲೂ ಪರಕಾಲ ಪ್ರಭಾಕರ್ ಭಾಗವಹಿಸಿದ್ದರು. ಆ ಸಂದರ್ಭದಲ್ಲಿ ಯೂಟ್ಯೂಬರ್ ಧ್ರುವ್ ರಾಠಿ ಹಾಗೂ ನಟ ಪ್ರಕಾಶ್‌ರಾಜ್ ಕೂಡ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಪತಿ ಪರಕಾಲ ಪ್ರಭಾಕರ್, ಆಡಳಿತಾರೂಢ ಬಿಜೆಪಿಯ ನೀತಿಗಳ ಕುರಿತು ಬಹಿರಂಗವಾಗಿ ಟೀಕೆ ಮಾಡುತ್ತಾ ಬಂದಿದ್ದಾರೆ. ನಿರ್ಮಲಾ ಸೀತಾರಾಮನ್ ಬಿಜೆಪಿಯೊಂದಿಗೆ ದೀರ್ಘಕಾಲದ ರಾಜಕೀಯ ಸಂಬಂಧ ಹೊಂದಿದ್ದರೂ ಪ್ರಭಾಕರ್ ನಿಲುವುಗಳು ಭಿನ್ನವಾಗಿವೆ. ತಮ್ಮ ದಿ ಕ್ರೂಕೆಡ್ ಟಿಂಬರ್ ಆಫ್ ನ್ಯೂ ಇಂಡಿಯಾ ಪುಸ್ತಕದಲ್ಲಿ ಅವರು ನೋಟು ಅಮಾನ್ಯೀಕರಣದಂತಹ ನಿರ್ಧಾರಗಳನ್ನು ತೀವ್ರವಾಗಿ ಟೀಕಿಸಿದ್ದಾರೆ. ಹೆಚ್ಚುತ್ತಿರುವ ನಿರುದ್ಯೋಗದ ಬಗ್ಗೆಯೂ ಕಳವಳ ವ್ಯಕ್ತಪಡಿಸಿದ್ದು, ಪ್ರಜಾಪ್ರಭುತ್ವ ಸಂಸ್ಥೆಗಳು ದುರ್ಬಲಗೊಳ್ಳುತ್ತಿವೆ ಎಂದು ಪ್ರಶ್ನಿಸಿದ್ದಾರೆ.

ಆಂಧ್ರಪ್ರದೇಶದ ನರಸಾಪುರಂನಲ್ಲಿ ಜನಿಸಿದ ಪ್ರಭಾಕರ್, ದೆಹಲಿಯ ಜವಾಹರಲಾಲ್ ನೆಹರು ವಿಶ್ವವಿದ್ಯಾಲಯದಲ್ಲಿ (ಜೆಎನ್ ಯು) ಓದುತ್ತಿದ್ದ ಸಂದರ್ಭದಲ್ಲಿ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಿದ್ದರು. ರಾಜಕೀಯ ನಿಲುವುಗಳಲ್ಲಿ ಭಿನ್ನಾಭಿಪ್ರಾಯಗಳಿದ್ದರೂ, ಇಬ್ಬರೂ 1986ರಲ್ಲಿ ವಿವಾಹವಾಗಿದ್ದರು. ಆರ್ಥಿಕ ವಿಚಾರಗಳ ಕುರಿತು ತಮ್ಮ ನೇರ ನಿಲುವುಗಳಿಗೆ ಹೆಸರಾದ ಪ್ರಭಾಕರ್, ರಾಜಕೀಯದಲ್ಲೂ ಸಕ್ರಿಯರಾಗಿದ್ದರು.

2009ರಲ್ಲಿ ನಟ ಚಿರಂಜೀವಿ ಸ್ಥಾಪಿಸಿದ್ದ ಪ್ರಜಾರಾಜ್ಯಂ ಪಕ್ಷದೊಂದಿಗೆ ಅವರು ಗುರುತಿಸಿಕೊಂಡಿದ್ದರು. ಬಳಿಕ 2014ರಿಂದ 2018ರವರೆಗೆ ಆಂಧ್ರಪ್ರದೇಶದಲ್ಲಿ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ನೇತೃತ್ವದ ಸರ್ಕಾರದ ಸಂವಹನ ಸಲಹೆಗಾರರಾಗಿ ಕಾರ್ಯನಿರ್ವಹಿಸಿದ್ದರು. ಆಂಧ್ರಪ್ರದೇಶಕ್ಕೆ ವಿಶೇಷ ಸ್ಥಾನಮಾನ ನೀಡುವ ವಿಚಾರದಲ್ಲಿ ತೆಲುಗುದೇಶಂ ಪಕ್ಷ ಎನ್‌ಡಿಎ ಮೈತ್ರಿಕೂಟದಿಂದ ಹೊರಬಂದ ಕೆಲವೇ ವಾರಗಳ ಬಳಿಕ, 2018ರ ಏಪ್ರಿಲ್ನಲ್ಲಿ ಪ್ರಭಾಕರ್ ತಮ್ಮ ಹುದ್ದೆಗೆ ದಿಢೀರ್ ರಾಜೀನಾಮೆ ನೀಡಿದ್ದರು.

ನಿರ್ಮಲಾ ಸೀತಾರಾಮನ್ ಅವರು ಬೇರೆ ರಾಜಕೀಯ ಪಕ್ಷಕ್ಕೆ ಸೇರಿದವರಾಗಿರುವುದರಿಂದ, ಪ್ರಭಾಕರ್ ರಾಜ್ಯದ ಹಿತಾಸಕ್ತಿಗಳ ವಿಚಾರದಲ್ಲಿ ರಾಜಿ ಮಾಡಿಕೊಳ್ಳಬಹುದು ಎಂದು ವಿರೋಧ ಪಕ್ಷಗಳು ಆರೋಪಿಸಿದ್ದವು. ಈ ಆರೋಪಗಳ ನಡುವೆಯೇ ಅವರು ಹುದ್ದೆ ತೊರೆದಿದ್ದರು. ಅ.23ರ ಪ್ರತಿಭಟನೆಯಲ್ಲಿ ಅವರ ಭಾಗವಹಿಸುವಿಕೆ ಎಸ್‌ಐಆರ್ ವಿರೋಧಿ ಹೋರಾಟಕ್ಕೆ ಮತ್ತಷ್ಟು ಗಮನ ಸೆಳೆಯುವ ಸಾಧ್ಯತೆಯಿದೆ.

ಎಸ್‌ಐಆರ್ ವಿರೋಧಿ ಪ್ರತಿಭಟನೆಯಲ್ಲಿ ಹಲವು ಪ್ರಮುಖ ವ್ಯಕ್ತಿಗಳು ಪಾಲ್ಗೊಳ್ಳುವ ನಿರೀಕ್ಷೆಯು ಹೊಸದಾಗಿ ರಚನೆಯಾಗಿರುವ ಪೀಪಲ್ ಅಗೇನ್ಸ್ಟ್ ಎಸ್‌ಐಆರ್ ಮೈತ್ರಿಕೂಟದತ್ತ ಗಮನ ಸೆಳೆದಿದೆ. ಅ.14ರಂದು ರಚನೆಯಾದ ಈ ಒಕ್ಕೂಟವು ವಿದ್ಯಾರ್ಥಿಗಳು, ರೈತರು, ದಲಿತರು, ಆದಿವಾಸಿಗಳು ಹಾಗೂ ಅಲ್ಪಸಂಖ್ಯಾತ ಸಮುದಾಯಗಳ ವಿವಿಧ ಸಂಘಟನೆಗಳನ್ನು ಒಂದೇ ವೇದಿಕೆಗೆ ತಂದಿದೆ. ಮತದಾರರ ಪಟ್ಟಿ ಪರಿಷ್ಕರಣೆಯ ವಿರುದ್ಧ ವಿವಿಧ ಸಮುದಾಯಗಳು ಒಗ್ಗೂಡಿ ಧ್ವನಿ ಎತ್ತುತ್ತಿರುವ ಹಿನ್ನೆಲೆಯಲ್ಲಿ, ಶುಕ್ರವಾರದ ಪ್ರತಿಭಟನೆ ರಾಷ್ಟ್ರವ್ಯಾಪಿ ಗಮನ ಸೆಳೆಯುವ ನಿರೀಕ್ಷೆಯಿದೆ.

ಎಪ್‌ಸ್ಟೀನ್ ಫೋಟೊ ಬಾಂಬ್: ಮೋದಿ–ಪುರಿ ವಿರುದ್ಧ ವಾಗ್ದಾಳಿ

ನವದೆಹಲಿ, ಅ. 22: ಲೈಂಗಿಕ ದೌರ್ಜನ್ಯದ ಆರೋಪ ಹೊತ್ತಿದ್ದ ಅಮೆರಿಕದ ಕುಖ್ಯಾತ ಅಪರಾಧಿ ಜೆಫ್ರಿ ಎಪ್‌ಸ್ಟೀನ್ ಜೊತೆ ಕೇಂದ್ರ ಪೆಟ್ರೋಲಿಯಂ ಸಚಿವ ಹರ್ದೀಪ್ ಸಿಂಗ್ ಪುರಿ ಅವರು ನಡೆಸಿದ್ದಾರೆ ಎನ್ನಲಾದ ಭೇಟಿಗಳ ವಿಚಾರ ಮತ್ತೆ ಚರ್ಚೆಯ ಕೇಂದ್ರಬಿಂದುವಾಗಿದೆ. ಸದ್ಯ ಸೋಷಿಯಲ್ ಮೀಡಿಯಾದಲ್ಲಿ ಭಾರೀ ಸದ್ದು ಮಾಡುತ್ತಿರುವ ಸಚಿವ ಹರ್ದೀಪ್ ಅವರು ಎಪ್‌ಸ್ಟೀನ್ ಜೊತೆಗಿರುವ ಫೋಟೊಗಳು ರಾಜಕೀಯ ವಲಯದಲ್ಲಿ ಹೊಸ ವಿವಾದಕ್ಕೆ ನಾಂದಿ ಹಾಡಿವೆ. ಫೋಟೊಗಳ ಬಿಡುಗಡೆಯ ಸಮಯ, ಪುರಿ ಅವರು ಈ ಹಿಂದೆ ಹೇಳಿದ್ದ ಹೇಳಿಕೆಗಳು ಮತ್ತು ಎಪ್‌ಸ್ಟೀನ್ ಜೊತೆಗಿನ ಸಂಪರ್ಕದ ಸ್ವರೂಪವನ್ನು ಮುಂದಿಟ್ಟುಕೊಂಡು ಕಾಂಗ್ರೆಸ್, ಟಿಎಂಸಿ ಸೇರಿದಂತೆ ವಿರೋಧ ಪಕ್ಷಗಳ ನಾಯಕರು ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಮುಂಬೈಗೆ ಭೇಟಿ ನೀಡಿದ ಸಂದರ್ಭದಲ್ಲೇ ಫೋಟೊ ಬಿಡುಗಡೆಯಾಗಿದೆ ಎಂಬ ಅಂಶವನ್ನು ಉಲ್ಲೇಖಿಸಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಇದರ ಹಿಂದೆ ಏನಾದರೂ ಒತ್ತಡದ ತಂತ್ರವಿದೆಯೇ ಎಂದು ಪ್ರಶ್ನಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ರೂಬಿಯೊ ಮುಂಬೈಗೆ ಬರುತ್ತಾರೆ. ಅಮೆರಿಕದ ನ್ಯಾಯಾಂಗ ಇಲಾಖೆ ಎಪ್‌ಸ್ಟೀನ್ ಮತ್ತು ಪುರಿ ಅವರ ಫೋಟೊವನ್ನು ಬಿಡುಗಡೆ ಮಾಡುತ್ತದೆ. ಅಮೆರಿಕ ಯಾವ ದೇಶದ್ರೋಹಿಯನ್ನು ಬೆದರಿಸುತ್ತಿದೆ ಎಂದು ನೀವು ಭಾವಿಸುತ್ತೀರಿ ಎಂದು ಬಿಜೆಪಿ ಮತ್ತು ಆರ್‌ಎಸ್‌ಎಸ್ ಕಾರ್ಯಕರ್ತರನ್ನು ಪ್ರಶ್ನಿಸಿದ್ದಾರೆ.

ಟಿಎಂಸಿ ಸಂಸದೆ ಮಹುವಾ ಮೊಯಿತ್ರಾ ಹರ್ದೀಪ್ ಸಿಂಗ್ ಪುರಿ ಅವರ ಹಿಂದಿನ ಹೇಳಿಕೆಯನ್ನು ಪ್ರಶ್ನಿಸಿ ವ್ಯಂಗ್ಯವಾಡಿದ್ದಾರೆ. ಎಪ್‌ಸ್ಟೀನ್ ಅವರನ್ನು ನಿಯೋಗದ ಭಾಗವಾಗಿ ಕೇವಲ ಮೂರು ಅಥವಾ ನಾಲ್ಕು ಬಾರಿ ಭೇಟಿಯಾಗಿದ್ದಾಗಿ ಪುರಿ ಈ ಹಿಂದೆ ಹೇಳಿದ್ದರು. ಹಾಗಾದರೆ, ಈಗಿನ ಫೋಟೊಗಳಲ್ಲಿ ಉಳಿದ ನಿಯೋಗದ ಸದಸ್ಯರು ಮೇಜಿನ ಕೆಳಗೆ ಅಡಗಿದ್ದರೇ, ಪುರಿ ಅವರೇ ಎಂದು ಅವರು ಟೀಕಿಸಿದ್ದಾರೆ. ಮತ್ತೊಂದು ಪೋಸ್ಟ್‌ನಲ್ಲಿ , ಸ್ವಲ್ಪವಾದರೂ ನಾಚಿಕೆ ಇರಲಿ. ಕನಿಷ್ಠ ಈಗಲಾದರೂ ಸಚಿವ ಸಂಪುಟ ಸಭೆಗಳಿಗೆ ಹಾಜರಾಗುವುದನ್ನು ನಿಲ್ಲಿಸಿ ಎಂದು ಆಗ್ರಹಿಸಿದ್ದಾರೆ. ಪ್ರಧಾನಿ ಮೋದಿ ಅವರು ಪುರಿ ಅವರನ್ನು ಸಚಿವ ಸಂಪುಟದಿಂದ ಕೈಬಿಡದಿರುವುದನ್ನೂ ಮಹುವಾ ಪ್ರಶ್ನಿಸಿದ್ದಾರೆ. ಮುಂದಿನ ಆರು ತಿಂಗಳ ಕಾಲ ಸಚಿವ ಸಂಪುಟ ಸಭೆಗಳಿಗೆ ಹಾಜರಾಗುವಂತೆ ಪುರಿ ಅವರಿಗೆ ಸೂಚಿಸಲಾಗಿದೆ ಎಂಬ ಹೇಳಿಕೆಯನ್ನು ಉಲ್ಲೇಖಿಸಿ, ಮೋದಿ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

ಕಾಂಗ್ರೆಸ್ಸ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ ಪವನ್ ಖೇರಾ ಅವರು ಪುರಿ ನೀಡಿರುವ ವಿವರಣೆಯನ್ನು ಪ್ರಶ್ನಿಸಿದ್ದಾರೆ. ಅಮೆರಿಕದ ನ್ಯಾಯಾಂಗ ಇಲಾಖೆಯ ವೆಬ್‌ಸೈಟ್‌ನಲ್ಲಿರುವ ದಾಖಲೆಗಳನ್ನು ಉಲ್ಲೇಖಿಸಿ, 2014ರಿಂದ 2017ರ ಅವಧಿಯಲ್ಲಿ ಪುರಿ ಮತ್ತು ಎಪ್‌ಸ್ಟೀನ್ ನಡುವೆ 62 ಇ–ಮೇಲ್‌ಗಳ ವಿನಿಮಯ ನಡೆದಿತ್ತು. ಅಲ್ಲದೆ, ಇದುವರೆಗೆ ಲಭ್ಯವಾಗಿರುವ ಮಾಹಿತಿಯ ಪ್ರಕಾರ 14 ಸಭೆಗಳು ಮತ್ತು ವ್ಯಾಪಕ ಸಂವಹನಗಳು ನಡೆದಿದ್ದು, ಅವುಗಳಲ್ಲಿ ಕೆಲವು ಒಬ್ಬರಿಗೊಬ್ಬರು ಭೇಟಿಯಾದ ಸಂದರ್ಭಗಳಾಗಿದ್ದವು ಎಂದೂ ಖೇರಾ ಹೇಳಿದ್ದಾರೆ. ಹೊಸದಾಗಿ ಬಹಿರಂಗವಾದ ಫೋಟೊಗಳು ನಾವು ಎತ್ತಿರುವ ಪ್ರಶ್ನೆಗಳಿಗೆ ಮತ್ತಷ್ಟು ಬಲ ನೀಡಿವೆ. ಆದರೂ ಹಲವು ಪ್ರಶ್ನೆಗಳು ಇನ್ನೂ ಉತ್ತರಕ್ಕಾಗಿ ಕಾಯುತ್ತಿವೆ ಎಂದು ಅವರು ಹೇಳಿದ್ದಾರೆ. ಎಪ್‌ಸ್ಟೀನ್ ಜೊತೆಗಿನ ಭೇಟಿಗಳ ನಿಜವಾದ ಉದ್ದೇಶವೇನು ಆ ಭೇಟಿಗಳಲ್ಲಿ ಯಾವ ವಿಷಯಗಳ ಬಗ್ಗೆ ಚರ್ಚಿಸಲಾಯಿತು ತಮ್ಮ ಸಂಪರ್ಕದ ಸಂಪೂರ್ಣ ವಿವರಗಳನ್ನು ಪುರಿ ಬಹಿರಂಗಪಡಿಸುತ್ತಾರೆಯೇ ಎಂಬ ಪ್ರಶ್ನೆಗಳನ್ನು ಖೇರಾ ಮುಂದಿಟ್ಟಿದ್ದಾರೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರು ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಎಪ್‌ಸ್ಟೀನ್ ಜೊತೆ ಪುರಿ ಅವರ ಸಂಪರ್ಕದ ಬಗ್ಗೆ ಪ್ರಶ್ನೆಗಳು ಎದ್ದಿದ್ದರೂ ಸರ್ಕಾರ ಮೌನ ವಹಿಸಿದೆ. ಈ ವಿಷಯದಲ್ಲಿ ಸರ್ಕಾರದ ಪ್ರತಿಕ್ರಿಯೆ ಮತ್ತು ಕ್ರಮಗಳ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಈ ಪ್ರಕರಣದ ಹಿನ್ನೆಲೆಯಲ್ಲಿ ಮಹಿಳೆಯರ ಸುರಕ್ಷತೆ ಮತ್ತು ಗೌರವದ ಬಗ್ಗೆ ಸರ್ಕಾರದ ನಿಲುವನ್ನು ಪ್ರಶ್ನಿಸಿರುವ ವೇಣುಗೋಪಾಲ್, ಅಮೆರಿಕದೊಂದಿಗೆ ನಡೆಯುತ್ತಿರುವ ವ್ಯಾಪಾರ ಒಪ್ಪಂದದ ಮೇಲೂ ಈ ಬೆಳವಣಿಗೆಗಳ ಪರಿಣಾಮ ಇರಬಹುದೇ ಎಂದು ಪ್ರಶ್ನಿಸಿದ್ದಾರೆ. ಕಾಂಗ್ರೆಸ್ ನಾಯಕಿ ಸುಪ್ರಿಯಾ ಶ್ರೀನಾಟೆ ಕೂಡ, ಪುರಿ ಅವರು ಎಪ್ಸ್ಟೀನ್ ಅವರನ್ನು ಒಬ್ಬರೇ ಭೇಟಿಯಾಗಿಲ್ಲ ಎಂದು ಹೇಳಿರಲಿಲ್ಲವೇ ಪ್ರಧಾನಿ ಮೋದಿ ತಮ್ಮ ಸುತ್ತ ಯಾವ ರೀತಿಯ ಜನರನ್ನು ಆಯ್ಕೆ ಮಾಡಿಕೊಳ್ಳುತ್ತಾರೆ ಎಂದು ಪ್ರಶ್ನಿಸಿದ್ದಾರೆ.

ಉ.ಪ್ರ: 16,000 ಮತದಾರರ ಪರಿಶೀಲನೆಗೆ ಆದೇಶ

ಲಖನೌ, ಅ.22: ಉತ್ತರ ಪ್ರದೇಶದ ಪಿಲಿಭಿತ್ ಸದರ್ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ ವೇಳೆ ಭಾರೀ ಅಕ್ರಮಗಳು ನಡೆದಿವೆ ಎಂಬ ಆರೋಪದ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಕ್ರಮಕ್ಕೆ ಮುಂದಾಗಿದೆ. ಮತದಾರರ ಪಟ್ಟಿಯಲ್ಲಿನ ಲೋಪಗಳಿಗೆ ಹೊಣೆಗಾರರೆಂದು ಆರೋಪಿಸಲಾದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಉತ್ತರ ಪ್ರದೇಶದ ಮುಖ್ಯ ಚುನಾವಣಾಧಿಕಾರಿ ನವದೀಪ್ ರಿನ್ವಾ ಆದೇಶಿಸಿದ್ದಾರೆ.

ಈ ಕ್ಷೇತ್ರದಲ್ಲಿ 13 ಸಾವಿರಕ್ಕೂ ಹೆಚ್ಚು ಮತದಾರರ ಹೆಸರುಗಳನ್ನು ಅಂತಿಮ ಮತದಾರರ ಪಟ್ಟಿ ಪ್ರಕಟವಾದ ಬಳಿಕ ಬದಲಾಯಿಸಲಾಗಿದೆ. ಅಲ್ಲದೆ, ಕ್ಷೇತ್ರದಲ್ಲೇ ವಾಸಿಸುತ್ತಿರುವ 800ಕ್ಕೂ ಹೆಚ್ಚು ಜನರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದ್ದು, ಕ್ಷೇತ್ರದಲ್ಲಿ ವಾಸಿಸದ ಸುಮಾರು 2,600 ಜನರ ಹೆಸರುಗಳನ್ನು ಹೊಸದಾಗಿ ಸೇರಿಸಲಾಗಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ಈ ಎಲ್ಲ ಆರೋಪಿತ ಬದಲಾವಣೆಗಳಿಂದ 16 ಸಾವಿರಕ್ಕೂ ಹೆಚ್ಚು ಮತದಾರರು ಪರಿಣಾಮಕ್ಕೆ ಒಳಗಾಗಿರುವ ಸಾಧ್ಯತೆಯಿದೆ.

ಕಾಂಗ್ರೆಸ್ ನಾಯಕಿ ಸುಪ್ರಿಯಾ ಶ್ರೀನಾಟೆ ಮತ್ತು ಪಕ್ಷದ ಇತರ ನಾಯಕರು ಮತದಾರರ ಪಟ್ಟಿಯಲ್ಲಿನ ವ್ಯತ್ಯಾಸಗಳ ಕುರಿತು ಪ್ರಶ್ನಿಸಿದ್ದಾರೆ. ಕಾಂಗ್ರೆಸ್ ನಾಯಕ ರಾಜೇಂದ್ರ ಪಾಲ್ ಗೌತಮ್ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಏಪ್ರಿಲ್‌ನಲ್ಲಿ ಅಂತಿಮ ಮತದಾರರ ಪಟ್ಟಿ ಪ್ರಕಟವಾದ ನಂತರ ಜುಲೈನಿಂದ ಸೆಪ್ಟೆಂಬರ್ ಅವಧಿಯಲ್ಲಿ ಹೆಸರುಗಳನ್ನು ಬದಲಾಯಿಸಲಾಗಿದೆ ಎಂದು ಆರೋಪಿಸಿದ್ದಾರೆ.

ಮತದಾರರು ಅಂತಿಮ ಪಟ್ಟಿಯಲ್ಲಿ ತಮ್ಮ ಹೆಸರು, ವಿಳಾಸ, ಮತದಾರರ ಗುರುತಿನ ಚೀಟಿ ಸಂಖ್ಯೆ ಮತ್ತು ಕ್ರಮಸಂಖ್ಯೆಯನ್ನು ಪರಿಶೀಲಿಸಿ, ತಮ್ಮ ಮತದಾನದ ಹಕ್ಕು ಸುರಕ್ಷಿತವಾಗಿದೆ ಎಂದು ಭಾವಿಸುತ್ತಾರೆ. ಆದರೆ, ನಂತರ ಹೆಸರು ಬದಲಾದರೆ ಮತದಾನದ ದಿನ ಗುರುತಿನ ಚೀಟಿ ಮತ್ತು ಇತರ ದಾಖಲೆಗಳಿದ್ದರೂ ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲ ಎಂದು ಹೇಳುವ ಸಾಧ್ಯತೆಯಿದೆ? ಎಂದು ಗೌತಮ್ ಆತಂಕ ವ್ಯಕ್ತಪಡಿಸಿದ್ದಾರೆ. ಇಂತಹ ಲೋಪಗಳು ಇತರ ವಿಧಾನಸಭಾ ಕ್ಷೇತ್ರಗಳಲ್ಲಿಯೂ ನಡೆದಿರಬಹುದು ಎಂದು ಅವರು ಶಂಕಿಸಿದ್ದಾರೆ.

ಉತ್ತರ ಪ್ರದೇಶದ ಮುಖ್ಯ ಚುನಾವಣಾಧಿಕಾರಿ ನವದೀಪ್ ರಿನ್ವಾ ಅವರ ಪ್ರಕಾರ, ಪಿಲಿಭಿತ್ ಜಿಲ್ಲಾ ಚುನಾವಣಾಧಿಕಾರಿ ನಡೆಸಿದ ತನಿಖೆಯಲ್ಲಿ ಕೆಲವು ಮತದಾರರ ಎಪಿಕ್ ಸಂಖ್ಯೆಯನ್ನು ಆನ್‌ಲೈನ್‌ನಲ್ಲಿ ಹುಡುಕಿದಾಗ ಬೇರೆಯವರ ವಿವರಗಳು ಕಾಣಿಸುತ್ತಿದ್ದವು ಎಂಬುದು ಪತ್ತೆಯಾಗಿದೆ. ಈ ಹಿನ್ನೆಲೆಯಲ್ಲಿ ಪಿಲಿಭಿತ್ ಸದರ್ ಕ್ಷೇತ್ರದ ಚುನಾವಣಾ ನೋಂದಣಿ ಅಧಿಕಾರಿ ಹಾಗೂ ಮತದಾರರ ನೋಂದಣಿ ಕೇಂದ್ರದ ನಿರ್ವಾಹಕರನ್ನು ಹುದ್ದೆಯಿಂದ ತೆಗೆದುಹಾಕುವಂತೆ ಆದೇಶಿಸಲಾಗಿದೆ. ಅಲ್ಲದೆ, ಲೋಪಗಳಿಗೆ ಹೊಣೆಗಾರರೆಂದು ಕಂಡುಬರುವ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

ರಾಜ್ಯದ ಎಲ್ಲ ಜಿಲ್ಲೆಗಳ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಗಳನ್ನು ಪರಿಶೀಲಿಸಿ, ಎರಡು ದಿನಗಳೊಳಗೆ ವರದಿ ಸಲ್ಲಿಸಬೇಕು ಎಂದೂ ಮುಖ್ಯ ಚುನಾವಣಾಧಿಕಾರಿ ನಿರ್ದೇಶನ ನೀಡಿದ್ದಾರೆ.

ಪಿಲಿಭಿತ್ ಸದರ್ ಕ್ಷೇತ್ರದ ಮತದಾರರ ಪಟ್ಟಿಯಲ್ಲಿನ ಆರೋಪಿತ ವ್ಯತ್ಯಾಸಗಳು ರಾಜಕೀಯವಾಗಿ ಮಹತ್ವ ಪಡೆದಿವೆ. 2022ರ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಸಂಜಯ್ ಗಂಗ್ವಾರ್ ಅವರು 7,000ಕ್ಕಿಂತ ಕಡಿಮೆ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು ಎಂದು ಕಾಂಗ್ರೆಸ್ ಉಲ್ಲೇಖಿಸಿದೆ. ಇದೀಗ 16 ಸಾವಿರಕ್ಕೂ ಹೆಚ್ಚು ಮತದಾರರ ಹೆಸರುಗಳಿಗೆ ಸಂಬಂಧಿಸಿದಂತೆ ಆರೋಪಗಳು ಕೇಳಿಬಂದಿರುವುದು ಮುಂದಿನ ಚುನಾವಣೆಯ ಹಿನ್ನೆಲೆಯಲ್ಲಿ ಚರ್ಚೆಗೆ ಕಾರಣವಾಗಿದೆ.

ಉತ್ತರ ಪ್ರದೇಶದಲ್ಲಿ ನಡೆದ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಪ

ಇಂದಿನಿಂದ ಹೊಸರೂಪದಲ್ಲಿ ಗೋಲ್ಡನ್ ಚಾರಿಯಟ್ ಐಷಾರಾಮಿ ಯಾತ್ರೆ: ಕೆ.ಜೆ.ಜಾರ್ಜ್

ಒಂದೇ ಯಾತ್ರೆಯಲ್ಲಿ ವನ್ಯಜೀವಿ, ರಾಜವೈಭವ, ವಿಶ್ವ ಪರಂಪರೆ, ಕಾಫಿ ನಾಡು ಮತ್ತು ಕರಾವಳಿ ಅನುಭವ

ಬೆಂಗಳೂರು, ಅ.22: ಕರ್ನಾಟಕದ ಪ್ರಮುಖ ಐಷಾರಾಮಿ ಪ್ರವಾಸಿ ರೈಲು ಗೋಲ್ಡನ್ ಚಾರಿಯಟ್ ಅ.24ರಂದು 2026–27ರ ಪ್ರವಾಸಿ ಋತುವಿನ ಯಾತ್ರೆಗಳನ್ನು ಹೊಸ ಮೆರುಗಿನಲ್ಲಿ ಆರಂಭಿಸಲಿದ್ದು, ವನ್ಯಜೀವಿ, ರಾಜವೈಭವ, ವಿಶ್ವ ಪರಂಪರೆ, ಕಾಫಿನಾಡು ಮತ್ತು ಕರಾವಳಿ ಅನುಭವಗಳನ್ನು ಒಂದೇ ಐಷಾರಾಮಿ ಯಾತ್ರೆಯಲ್ಲಿ ಪ್ರವಾಸಿಗರಿಗೆ ಪರಿಚಯಿಸಲಿದೆ ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಐದು ರಾತ್ರಿ–ಆರು ದಿನಗಳ ಮೊದಲ ಪ್ರೈಡ್ ಆಫ್ ಕರ್ನಾಟಕ ಐಷಾರಾಮಿ ಯಾತ್ರೆಗೆ ಶೇ.100ರಷ್ಟು ಬುಕ್ಕಿಂಗ್ ದೊರೆತಿದ್ದು, 75 ಅತಿಥಿಗಳು ಯಾತ್ರೆಯಲ್ಲಿ ಭಾಗವಹಿಸಲಿದ್ದಾರೆ. ಸುಮಾರು 60 ಸಿಬ್ಬಂದಿ ರೈಲಿನಲ್ಲಿ ಆತಿಥ್ಯ ಮತ್ತು ಇತರೆ ಸೇವೆಗಳನ್ನು ಒದಗಿಸಲಿದ್ದಾರೆ.

ಐದು ಅನುಭವ – ಒಂದೇ ಐಷಾರಾಮಿ ಯಾತ್ರೆ

ಪ್ರೈಡ್ ಆಫ್ ಕರ್ನಾಟಕ

ಮೊದಲ ಯಾತ್ರೆಗೆ ದೊರೆತಿರುವ ಉತ್ತಮ ಪ್ರತಿಕ್ರಿಯೆ ಪ್ರೋತ್ಸಾಹದಾಯಕವಾಗಿದೆ. ಈ ಯಶಸ್ಸನ್ನು ಮುಂದಿನ ಯಾತ್ರೆಗಳಿಗೂ ವಿಸ್ತರಿಸಿ ಕರ್ನಾಟಕದ ವೈವಿಧ್ಯಮಯ ಪ್ರವಾಸಿ ಅನುಭವಗಳನ್ನು ಹೆಚ್ಚಿನ ದೇಶೀಯ ಮತ್ತು ವಿದೇಶಿ ಪ್ರವಾಸಿಗರಿಗೆ ತಲುಪಿಸುವುದು ನಮ್ಮ ಆದ್ಯತೆಯಾಗಿದೆ. –ಎಂ. ಶ್ರೀನಿವಾಸ್, ಕೆಎಸ್‌ಟಿಡಿಸಿ ಅಧ್ಯಕ್ಷ

ಯಾತ್ರೆಯಲ್ಲಿ ಬಂಡೀಪುರದ ವನ್ಯಜೀವಿ, ಮೈಸೂರಿನ ರಾಜವೈಭವ, ಬೇಲೂರು–ಹಳೇಬೀಡಿನ ವಾಸ್ತುಶಿಲ್ಪ ಪರಂಪರೆ, ಚಿಕ್ಕಮಗಳೂರಿನ ಕಾಫಿ ತೋಟಗಳು, ಯುನೆಸ್ಕೋ ವಿಶ್ವ ಪರಂಪರೆ ತಾಣ ಹಂಪಿ ಹಾಗೂ ಗೋವಾದ ಕರಾವಳಿ ಮತ್ತು ಇಂಡೋ–ಪೋರ್ಚುಗೀಸ್ ಪರಂಪರೆ ಒಂದೇ ಯಾತ್ರೆಯಲ್ಲಿ ಒಳಗೊಂಡಿವೆ ಎಂದು ಕೆ.ಜೆ. ಜಾರ್ಜ್ ಹೇಳಿದರು.

ಹೊಸ ಋತುವಿಗೆ ಮುನ್ನ ರೈಲಿನ ನಿಗದಿತ ತಾಂತ್ರಿಕ ನಿರ್ವಹಣೆಯನ್ನು 2026ರ ಮೇಯಿಂದ ಆಗಸ್ಟ್‌ವರೆಗೆ ಮೈಸೂರು ವರ್ಕ್‌ಶಾಪ್‌ನಲ್ಲಿ ಕೈಗೊಳ್ಳಲಾಗಿದೆ. ಹೊರಾಂಗಣಕ್ಕೆ ಹೊಸ ರೂಪ ನೀಡಲಾಗಿದ್ದು, ಅತಿಥಿ ಸೇವೆ ಮತ್ತು ಅಡುಗೆ ವ್ಯವಸ್ಥೆಗಳನ್ನು ಬಲ ಪಡಿಸಲಾಗಿದೆ.

ಅಡುಗೆ ವಿಭಾಗದಲ್ಲಿ ಕಾಂಬಿ ಓವನ್, ಹೆಚ್ಚಿನ ಸಾಮರ್ಥ್ಯದ ಇಂಡಕ್ಷನ್ ವ್ಯವಸ್ಥೆ ಹಾಗೂ ಸುಧಾರಿತ ಆರ್‌ಒ ನೀರು ಶುದ್ಧೀಕರಣ ಘಟಕ ಸೇರಿದಂತೆ ಆಧುನಿಕ ಸೌಲಭ್ಯಗಳನ್ನು ಅಳವಡಿಸಲಾಗಿದೆ.

13 ಯಾತ್ರೆಗಳು

ಮೊದಲ ಯಾತ್ರೆಗೆ ದೊರೆತಿರುವ ಉತ್ತಮ ಪ್ರತಿಕ್ರಿಯೆಯನ್ನು ಆಧರಿಸಿ, ಗೋಲ್ಡನ್ ಚಾರಿಯಟ್‌ನ ವಿಶಿಷ್ಟ ಯಾತ್ರಾ ಮಾರ್ಗಗಳು ಮತ್ತು ಪ್ರೀಮಿಯಂ ಪ್ರವಾಸಿ ಅನುಭವವನ್ನು ದೇಶೀಯ ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ಪ್ರಚಾರ ಮಾಡಲು ಕರ್ನಾಟಕ ಪ್ರವಾಸೋದ್ಯಮ ಇಲಾಖೆ ಒತ್ತು ನೀಡಲಿದೆ. 2026–27ರ ಋತುವಿನಲ್ಲಿ ಒಟ್ಟು 13 ಐಷಾರಾಮಿ ಯಾತ್ರೆಗಳು ನಿಗದಿಯಾಗಿದ್ದು, ಪ್ರೈಡ್ ಆಫ್ ಕರ್ನಾಟಕದಡಿ 7, ಗ್ಲಿಂಪಸ್ ಆಫ್ ಕರ್ನಾಟಕದಡಿ 3 ಹಾಗೂ ಜ್ಯುವೆಲ್ಸ್ ಆಫ್ ಸೌಥ್ ಅಡಿ 3 ಯಾತ್ರೆಗಳು ನಡೆಯಲಿವೆ.

ಮೊದಲ ಯಾತ್ರೆಗೆ ದೊರೆತಿರುವ ಶೇ.100ರಷ್ಟು ಬುಕ್ಕಿಂಗ್ ಉತ್ತಮ ಆರಂಭವಾಗಿದೆ. ಈಗ ಈ ಬೇಡಿಕೆಯನ್ನು ಇಡೀ ಋತುವಿನವರೆಗೆ ಉಳಿಸಿಕೊಳ್ಳುವುದು ಮುಖ್ಯ. ರೈಲಿನ ಆತಿಥ್ಯ ಸೇವೆ, ತಾಣಗಳಲ್ಲಿನ ಅನುಭವ, ಮಾರುಕಟ್ಟೆ ಮತ್ತು ಬುಕ್ಕಿಂಗ್ ವ್ಯವಸ್ಥೆಯನ್ನು ಬಲಪಡಿಸಿ, ಗೋಲ್ಡನ್ ಚಾರಿಯಟ್ ಅನ್ನು ಪ್ರೀಮಿಯಂ ಪ್ರವಾಸ ಮಾರುಕಟ್ಟೆಯಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ಸ್ಥಾಪಿಸಲಾಗುವುದು. – ಡಾ. ರಾಮ್‌ಪ್ರಸಾತ್ ಮನೋಹರ್, ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ

ಬಿಕ್ಕಟ್ಟು ನಿಭಾಯಿಸಲು ಉಂಟಾದ ಹೆಚ್ಚುವರಿ ವೆಚ್ಚ ಸರಿದೂಗಿಸಲು ಇಂಧನ ಇಲಾಖೆ ಕ್ರಮ

ನವೆಂಬರ್‌ನಿಂದ ಪ್ರತಿ ಯೂನಿಟ್ ವಿದ್ಯುತ್‌ಗೆ 50 ಪೈಸೆ ಏರಿಕೆ ಸಾಧ್ಯತೆ?

ಬೆಂಗಳೂರು, ಅ.22: ರಾಜ್ಯದಲ್ಲಿ ಕಳೆದ ಸೆಪ್ಟೆಂಬರ್ ತಿಂಗಳಿನಲ್ಲಿ ಉಂಟಾಗಿದ್ದ ತೀವ್ರ ವಿದ್ಯುತ್ ಬಿಕ್ಕಟ್ಟನ್ನು ನಿಭಾಯಿಸಲು ಉಂಟಾದ ಹೆಚ್ಚುವರಿ ವೆಚ್ಚವನ್ನು ಸರಿದೂಗಿಸಲು, ಅಕ್ಟೋಬರ್ ಮತ್ತು ನವೆಂಬರ್ ಅವಧಿಯಲ್ಲಿ ವಿದ್ಯುತ್ ದರವನ್ನು ಪ್ರತಿ ಯೂನಿಟ್‌ಗೆ 40 ರಿಂದ 50 ಪೈಸೆಯಷ್ಟು ಹೆಚ್ಚಿಸಲು ರಾಜ್ಯ ಸರ್ಕಾರ ಹಾಗೂ ಇಂಧನ ಇಲಾಖೆ ಮುಂದಾಗಿದೆ.

ಮುಂಬರುವ ನ.1ರಿಂದಲೇ ನೂತರ ದರ ಪರಿಷ್ಕರಣೆಯಾಗುವ ಸಂಭವವಿದೆ. ಈ ದರ ಏರಿಕೆಯು ಇಂಧನ ಮತ್ತು ವಿದ್ಯುತ್ ಖರೀದಿ ವೆಚ್ಚ ಹೊಂದಾಣಿಕೆ ನಿಯಮಾವಳಿ ಅಡಿಯಲ್ಲಿ ಬರಲಿದ್ದು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ಅಂತಿಮ ಅನುಮೋದನೆಯೊಂದಿಗೆ ಜಾರಿಗೆ ಬರಲಿದೆ. ಉಚಿತ ವಿದ್ಯುತ್ ಒದಗಿಸುವ ಗೃಹ ಜ್ಯೋತಿ ಯೋಜನೆಯ ವ್ಯಾಪ್ತಿಗೆ ಬಾರದ ಗ್ರಾಹಕರು ಮತ್ತು ವಾಣಿಜ್ಯ ಬಳಕೆಯ ಗ್ರಾಹಕರು ಈ ಹೆಚ್ಚುವರಿ ದರವನ್ನು ತಮ್ಮ ಮಾಸಿಕ ಬಿಲ್‌ನಲ್ಲಿ ಪಾವತಿಸ ಬೇಕಾಗುತ್ತದೆ.

ಸೆಪ್ಟೆಂಬರ್ ತಿಂಗಳಿನಲ್ಲಿ ನೈಋತ್ಯ ಮುಂಗಾರು ಮಳೆಯ ಅಭಾವ ಮತ್ತು ಒಣ ಹವೆಯ ವಾತಾವರಣ ದಿಂದಾಗಿ ರಾಜ್ಯದಾದ್ಯಂತ ವಿದ್ಯುತ್‌ಗೆ ಅಭೂತಪೂರ್ವ ಬೇಡಿಕೆ ಸೃಷ್ಟಿಯಾಗಿತ್ತು. ರಾಜ್ಯದ ಇತಿಹಾಸದಲ್ಲೇ ಮೊದಲ ಬಾರಿಗೆ ವಿದ್ಯುತ್ ಬೇಡಿಕೆಯು ಬರೋಬ್ಬರಿ 20,000 ಮೆಗಾವ್ಯಾಟ್ ದಾಟಿ ಹೊಸ ದಾಖಲೆ ಬರೆದಿದೆ.

ಕುಸಿದ ಪವನ ವಿದ್ಯುತ್ ಉತ್ಪಾದನೆ

ರಾಜ್ಯದಲ್ಲಿ ಜಲ, ಉಷ್ಣ, ಸೌರ ಮತ್ತು ಪವನ ಶಕ್ತಿಯ ಮೂಲಗಳಿಂದ ಒಟ್ಟು 22,000 ಮೆಗಾವ್ಯಾಟ್‌ವರೆಗೆ ಬೇಡಿಕೆ ಪೂರೈಸುವ ಸಾಮರ್ಥ್ಯ ವಿದ್ದರೂ, ಗಾಳಿಯ ವೇಗ ಕಡಿಮೆಯಾದ ಕಾರಣ ಪವನ ವಿದ್ಯುತ್ ಉತ್ಪಾದನೆ ತೀವ್ರವಾಗಿ ಕುಸಿಯಿತು. ದೈನಂದಿನ 2,500 – 3,000 ಮೆಗಾವ್ಯಾಟ್ ತಲುಪುತ್ತಿದ್ದ ಪವನ ವಿದ್ಯುತ್ ಉತ್ಪಾದನೆ ಕೇವಲ 200 – 300 ಮೆಗಾವ್ಯಾಟ್‌ಗೆ ಕುಸಿಯಿತು. ರಾತ್ರಿಯ ಸಮಯದಲ್ಲಿ ಸೌರ ವಿದ್ಯುತ್ ಲಭ್ಯವಿಲ್ಲದಿರುವುದರಿಂದ ಮತ್ತು ಪವನ ವಿದ್ಯುತ್ ಉತ್ಪಾದನೆಯೂ ಇಳಿಕೆಯಾದ್ದರಿಂದ ಪವರ್ ಗ್ರಿಡ್ ಮೇಲಿನ ಒತ್ತಡ ತೀವ್ರವಾಗಿ ಹೆಚ್ಚಾಯಿತು.

ವಾಣಿಜ್ಯ ಸಂಸ್ಥೆಗಳ ಸವಾಲು :ವಾಣಿಜ್ಯ ಸಂಸ್ಥೆಗಳ ಕಾರ್ಯಾಚರಣೆ ನಿಯಂತ್ರಿಸಲು ಸಾಧ್ಯವಿಲ್ಲದಿದ್ದರೂ, ಗೃಹ ಬಳಕೆಯ ಗ್ರಾಹಕರು ಸ್ವಯಂಪ್ರೇರಿತವಾಗಿ ರಾತ್ರಿ ವೇಳೆಯ ಬಳಕೆಯನ್ನು ಯೋಜಿಸಿದರೆ ಜಾಲದ ಮೇಲಿನ ಒತ್ತಡ ಕಡಿಮೆಯಾಗಲಿದೆ. ಕರ್ನಾಟಕವು ಈಗಾಗಲೇ 3 ವರ್ಷಗಳ ಅವಧಿಯ ದರ ನಿಗದಿ ವ್ಯವಸ್ಥೆಯನ್ನು ಅಳವಡಿಸಿಕೊಂಡಿದ್ದು, 2025ರ ದರ ಪರಿಷ್ಕರಣೆಯು 2028ರವರೆಗೆ ಜಾರಿಯಲ್ಲಿರುತ್ತದೆ.

ಆದಾಗ್ಯೂ, ಸೆಪ್ಟೆಂಬರ್‌ನಲ್ಲಾದ ಅಸಾಧಾರಣ ವೆಚ್ಚವನ್ನು ಭರಿಸಲು ಎಫ್.ಪಿ.ಪಿ.ಸಿ.ಎ ಅಡಿಯಲ್ಲಿ ಈ ತಾತ್ಕಾಲಿಕ ಅಲ್ಪಾವಧಿ ಹೆಚ್ಚಳವನ್ನು ಕೈಗೊಳ್ಳಲಾಗುತ್ತಿದ್ದು, ಇದು ಮುಂಬರುವ ತಿಂಗಳಿಗೆ ಮಾತ್ರ ಅನ್ವಯಿಸಲಿದೆ ಎಂದು ಇಂಧನ ಇಲಾಖೆಯ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಶೃಂಗೇರಿಯಲ್ಲಿ ಗುರುವಾರ ಭಕ್ತರೊಂದಿಗೆ ಕಂಡುಬಂದ ಶ್ರೀಶಾರದಾಂಬೆಯ ರಥೋತ್ಸವ.

ನಿರ್ದಿಷ್ಟವಾಗಿ ಆದೇಶಿಸದ ಹೊರತು ನ್ಯಾಯಾಲಯದ ಕಲಾಪ ಸಂಗ್ರಹದ ಆಡಿಯೋ-ವೀಡಿಯೋ ದಾಖಲೆ ಪಡೆಯಲು ಅರ್ಜಿದಾರರಿಗೆ ಸ್ವತಂತ್ರ ಹಕ್ಕಿಲ್ಲ: ಹೈಕೋರ್ಟ್

ನ್ಯಾಯಕ್ಕಾಗಿ ಧ್ವನಿ ಎತ್ತಿ ಎನ್ನುವ ಪೋಸ್ಟರ್ ಹಾಕುವುದು ದ್ವೇಷ ಪ್ರಚೋದಿಸುವ ಅಪರಾಧವಲ್ಲ: ಹೈಕೋರ್ಟ್

ಬೆಂಗಳೂರು, ಅ.22: ನ್ಯಾಯಾಲಯದ ಕಲಾಪಗಳ ಸಂಗ್ರಹ ಮಾಡಲಾದ ಆಡಿಯೊ–ವಿಡಿಯೊ ದಾಖಲೆಗಳ ಪ್ರತಿಗಳನ್ನು ಪಡೆಯಲು ಅರ್ಜಿದಾರರಿಗೆ ಸ್ವಯಂಚಾಲಿತ ಹಕ್ಕಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಇತ್ತೀಚೆಗೆ ಮಹತ್ವದ ತೀರ್ಪು ನೀಡಿದೆ.

ಕರ್ನಾಟಕ ನ್ಯಾಯಾಲಯಗಳ ಕಲಾಪಗಳ ನೇರ ಪ್ರಸಾರ ಮತ್ತು ರೆಕಾರ್ಡಿಂಗ್ ನಿಯಮಗಳು, 2021ರ ನಿಯಮ 8 ಮತ್ತು 10ರ ಪ್ರಕಾರ ಪೀಠವು ನಿರ್ದಿಷ್ಟವಾಗಿ ಆದೇಶಿಸದ ಹೊರತು ದಾಖಲೆಗಳ ಪ್ರತಿಗಳನ್ನು ಪಡೆಯುವ ಹಕ್ಕು ಅರ್ಜಿದಾರರಿಗೆ ಲಭ್ಯವಿಲ್ಲ ಎಂದು ನ್ಯಾಯಮೂರ್ತಿ ಸಿ.ಎಂ ಪೂಣಚ್ಚ ಅವರು ಸ್ಪಷ್ಟಪಡಿಸಿದ್ದಾರೆ.

ನಿಯಮ 8 ಮತ್ತು ನಿಯಮ 10ರ ಸಂಯೋಜಿತ ಓದಿನಿಂದ, ನ್ಯಾಯಾಲಯವು ನಿರ್ದಿಷ್ಟವಾಗಿ ಆದೇಶಿಸದ ಹೊರತು, ಸದರಿ ರೆಕಾರ್ಡಿಂಗ್‌ಗಳ ಪ್ರತಿಗಳನ್ನು ಕೋರುವ ಹಕ್ಕನ್ನು ಅರ್ಜಿದಾರರಿಗೆ ಈ ನಿಯಮಗಳು ಒದಗಿಸುವುದಿಲ್ಲ ಎಂಬುದು ಸ್ಪಷ್ಟವಾಗುತ್ತದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ನ್ಯಾಯಾಲಯದ ಮೇಲ್ಮನವಿ ವಿಚಾರಣೆಯ ಸಂಗ್ರಹ ಮಾಡಲಾದ ದಾಖಲೆಗಳ ಪ್ರತಿಗಳನ್ನು ನೀಡಲು ನಿರಾಕರಿಸಿದ ಹೈಕೋರ್ಟ್ ಆಡಳಿತ ವಿಭಾಗದ ನಿರ್ಧಾರ ಪ್ರಶ್ನಿಸಿ 72 ವರ್ಷದ ಎ ಸತ್ಯನಾರಾಯಣ ಸ್ವಾಮಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸುವ ವೇಳೆ ನ್ಯಾಯಾಲಯ ಈ ಅಭಿಪ್ರಾಯ ವ್ಯಕ್ತಪಡಿಸಿದೆ. ಅರ್ಜಿದಾರರು 2021ರ ನಿಯಮಗಳ ನಿಯಮ 8(3)ರ ಅಡಿಯಲ್ಲಿ ಕಲಾಪಗಳ ರೆಕಾರ್ಡಿಂಗ್‌ಗಳ ಪ್ರತಿಗಳನ್ನು ಕೋರಿ ಅರ್ಜಿ ಸಲ್ಲಿಸಿದ್ದರು. ಆದರೆ, ಹೈಕೋರ್ಟ್ ಆಡಳಿತ ವಿಭಾಗವು ಅವರ ಮನವಿಯನ್ನು ತಿರಸ್ಕರಿಸಿತ್ತು.

ಸಂಗ್ರಹ ಮಾಡಲಾದ ದಾಖಲೆಗಳು ಪೀಠವು ನಿರ್ದಿಷ್ಟವಾಗಿ ನಿರ್ದೇಶಿಸದ ಹೊರತು ನ್ಯಾಯಾಲಯದ ಕಲಾಪಗಳ ಅಧಿಕೃತ ದಾಖಲೆಯ ಭಾಗವಾಗುವುದಿಲ್ಲ ಎಂದು ಆಡಳಿತ ವಿಭಾಗ ತಿಳಿಸಿತ್ತು.

ಹೀಗಾಗಿ, ಅರ್ಜಿದಾರರು ಕೋರಿದ್ದ ದಾಖಲೆಗಳನ್ನು ಒದಗಿಸಲು ನಿರಾಕರಿಸಲಾಗಿತ್ತು. ಈ ನಿರ್ಧಾರದಿಂದ ಅಸಮಾಧಾನ ಗೊಂಡ ಅರ್ಜಿದಾರರು, ಆಡಳಿತ ವಿಭಾಗದ ಸಂವಹನವನ್ನು ರದ್ದುಗೊಳಿಸಿ ಸಂಗ್ರಹ ದಾಖಲೆಗಳನ್ನು ಪಡೆಯಲು ಅವಕಾಶ ಅನುನತಿಸುವಂತೆ ಹೈಕೋರ್ಟ್‌ಗೆ ಮನವಿ ಮಾಡಿದ್ದರು.

ಬೆಂಗಳೂರು, ಅ.22: ಸುಪ್ರೀಂ ಕೋರ್ಟ್ ತೀರ್ಪನ್ನು ವಿರೋಧಿಸಿ ನ್ಯಾಯ ನಿರಾಕರಣೆಯಾಗಿದೆ, ನ್ಯಾಯಕ್ಕಾಗಿ ಧ್ವನಿ ಎತ್ತಿ ಎಂದು ಪೋಸ್ಟರ್‌ಗಳನ್ನು ಹಾಕುವುದು ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಅಥವಾ ವಿವಿಧ ಗುಂಪುಗಳ ನಡುವೆ ದ್ವೇಷ ಪ್ರಚೋದಿಸುವ ಅಪರಾಧವಾಗುವುದಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಈಚೆಗೆ ಆದೇಶಿಸಿದೆ.

ಮಂಗಳೂರಿನಲ್ಲಿ ಸುಪ್ರೀಂ ಕೋರ್ಟ್ ತೀರ್ಪಿನ ವಿರುದ್ಧ ಪೋಸ್ಟರ್‌ಗಳನ್ನು ಅಂಟಿಸಿದ ಆರೋಪಕ್ಕೆ ಸಂಬಂಧಿಸಿದಂತೆ ದಾಖಲಾಗಿದ್ದ ಎಫ್‌ಐಆರ್ ರದ್ದುಕೋರಿ 13 ಮಂದಿ ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಮೂರ್ತಿ ಎಚ್.ಪಿ. ಸಂದೇಶ್ ಅವರ ಏಕಸದಸ್ಯ ಪೀಠವು ಆರೋಪಿಗಳ ವಿರುದ್ಧದ ಎಲ್ಲಾ ಕ್ರಿಮಿನಲ್ ಪ್ರಕ್ರಿಯೆ ರದ್ದುಗೊಳಿಸಿದೆ.

ಸುಪ್ರೀಂ ಕೋರ್ಟ್ ತೀರ್ಪಿನ ವಿರುದ್ಧ ಅಸಮಾಧಾನ ವ್ಯಕ್ತಪಡಿಸುವುದರಿಂದ ಮಾತ್ರ ದೇಶದ್ರೋಹದ ಕೃತ್ಯ ಎಸಗಿದಂತಾಗುವುದಿಲ್ಲ ಅಥವಾ ಸಾರ್ವಜನಿಕ ಅಶಾಂತಿಯನ್ನು ಉಂಟುಮಾಡಿದಂತಾಗುವುದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಪೋಸ್ಟರ್‌ಗಳಲ್ಲಿನ ಬರಹಗಳು ನ್ಯಾಯಾಲಯದ ತೀರ್ಪಿನ ಬಗೆಗಿನ ಅಸಮ್ಮತಿಯನ್ನು ಮಾತ್ರ ವ್ಯಕ್ತಪಡಿಸುತ್ತವೆ. ಅವು ದ್ವೇಷವನ್ನು ಪ್ರಚೋದಿಸುವ ಅಥವಾ ಸಮಾಜದಲ್ಲಿ ಸೌಹಾರ್ದತೆಯನ್ನು ಕೆಡಿಸುವ ಉದ್ದೇಶ ಹೊಂದಿವೆ ಎಂದು ಹೇಳಲಾಗದು ಎಂದು ಪೀಠ ಅಭಿಪ್ರಾಯಪಟ್ಟಿದೆ.

ಕೆಲವು ವ್ಯಕ್ತಿಗಳು ಪೋಸ್ಟರ್‌ಗಳಲ್ಲಿನ ಬರಹಗಳಿಂದ ಕೋಪಗೊಳ್ಳಬಹುದು ಎಂಬ ಕಾರಣಕ್ಕೆ ಭಾರತೀಯ ದಂಡ ಸಂಹಿತೆಯ (ಐಪಿಸಿ) ಸೆಕ್ಷನ್ 153ಎ ಅಥವಾ 295ಎ ಅಡಿ ಅಪರಾಧವನ್ನು ಅನ್ವಯಿಸಲಾಗದು ಎಂದು ನ್ಯಾಯಾಲಯ ಹೇಳಿದೆ. ಪೋಸ್ಟರ್‌ಗಳಲ್ಲಿನ ಅಭಿವ್ಯಕ್ತಿಗಳು ಸಂವಿಧಾನದ 19 ಮತ್ತು 21ನೇ ವಿಧಿಗಳ ಅಡಿಯಲ್ಲಿ ರಕ್ಷಣೆ ಪಡೆಯುತ್ತವೆ ಎಂದು ಪೀಠ ತಿಳಿಸಿದೆ.

ಸಾರ್ವಜನಿಕ ಹೇಳಿಕೆಗಳು ಅಥವಾ ಪೋಸ್ಟರ್‌ಗಳ ಪರಿಣಾಮವನ್ನು ಸಮಾಜದ ಸಾಮಾನ್ಯ, ವಿವೇಚನಾಶೀಲ ವ್ಯಕ್ತಿಯ ದೃಷ್ಟಿಕೋನದಿಂದ ಮೌಲ್ಯಮಾಪನ ಮಾಡಬೇಕು. ಕೆಲವೇ ವ್ಯಕ್ತಿಗಳ ವೈಯಕ್ತಿಕ ಭಾವನೆಗಳ ಆಧಾರದ ಮೇಲೆ ಅವುಗಳ ಪರಿಣಾಮವನ್ನು ನಿರ್ಧರಿಸಲಾಗದು ಎಂದು ನ್ಯಾಯಾಲಯ ಹೇಳಿದೆ. ಅರ್ಜಿದಾರರ ಪರ ವಕೀಲರು, ನ್ಯಾಯಾಲಯದ ತೀರ್ಪಿನ ಕುರಿತು ಅಸಮ್ಮತಿ ವ್ಯಕ್ತಪಡಿಸುವುದು ಸಂವಿಧಾನದ 19ನೇ ವಿಧಿಯಡಿ ಖಾತರಿಪಡಿಸಿರುವ ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಭಾಗವಾಗಿದೆ ಎಂದು ವಾದಿಸಿದ್ದರು.

ಪೋಸ್ಟರ್‌ಗಳಲ್ಲಿನ ಬರಹಗಳು ಯಾವುದೇ ಕಾನೂನುಬಾಹಿರ ಕೃತ್ಯಕ್ಕೆ ಪ್ರಚೋದನೆ ನೀಡುವುದಿಲ್ಲ. ಅವು ಸುಪ್ರೀಂ ಕೋರ್ಟ್ ತೀರ್ಪಿನ ವಿರುದ್ಧದ ಅಸಮಾಧಾನವನ್ನು ಮಾತ್ರ ವ್ಯಕ್ತಪಡಿಸುತ್ತವೆ ಎಂದು ವಾದಿಸಿದ್ದರು.

ಇದಕ್ಕೆ ಪ್ರತಿಯಾಗಿ, ಸುಪ್ರೀಂ ಕೋರ್ಟ್ ತೀರ್ಪಿನ ಬೆನ್ನಲ್ಲೇ ಸಾರ್ವಜನಿಕ ಸ್ಥಳಗಳಲ್ಲಿ ಇಂತಹ ಪೋಸ್ಟರ್‌ಗಳನ್ನು ಅಂಟಿಸಿರುವುದು ದೇಶದಲ್ಲಿ ಶಾಂತಿ ಮತ್ತು ಸೌಹಾರ್ದತೆಗೆ ಧಕ್ಕೆ ತರುವ ಸಾಧ್ಯತೆಯಿದೆ ಎಂದು ಸರ್ಕಾರದ ಪರ ವಕೀಲರು ವಾದಿಸಿದ್ದರು. ವಾದ–ಪ್ರತಿವಾದ ಆಲಿಸಿದ ಹೈಕೋರ್ಟ್, 13 ಆರೋಪಿಗಳ ವಿರುದ್ಧದ ಎಲ್ಲಾ ಕ್ರಿಮಿನಲ್ ಪ್ರಕ್ರಿಯೆ ರದ್ದುಗೊಳಿಸಿ ಆದೇಶಿಸಿದೆ.

ಮಧ್ಯರಾತ್ರಿಯಲ್ಲೂ ಶಬ್ದಮಾಲಿನ್ಯ ಚಲನಚಿತ್ರ ನಟಿ ರಮ್ಯಾ ಕಿಡಿ

ಬೆಂಗಳೂರು, ಅ.22: ಬೆಂಗಳೂರಿನಲ್ಲಿ ರಾತ್ರಿ ವೇಳೆ ಸಾರ್ವಜನಿಕರ ನಿದ್ದೆಗೆ ಭಂಗ ತರುವ ಮತ್ತು ಶಬ್ದಮಾಲಿನ್ಯ ನಿಯಮಗಳನ್ನು ಗಾಳಿಗೆ ತೂರುವ ಘಟನೆಗಳು ಮುಂದುವರಿದಿವೆ. ಈ ಬಗ್ಗೆ ಕಾಂಗ್ರೆಸ್ ಮಾಜಿ ಸಂಸದೆ, ನಟಿ ರಮ್ಯಾ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಿಯಮ ಉಲ್ಲಂಘನೆಗಳ ವಿರುದ್ಧ ಎಂದು ಕಿಡಿಕಾರಿದ್ದಾರೆ.

ಅರಮನೆ ಮೈದಾನದ ಬಳಿಯಿರುವ ಫನ್‌ವರ್ಲ್ಡ್ ಮನರಂಜನಾ ಕೇಂದ್ರದಲ್ಲಿ ಮಧ್ಯರಾತ್ರಿ ಬೆಳಗಿನಜಾವ 3 ಗಂಟೆಯ ಸುಮಾರಿನಲ್ಲೂ ಪಟಾಕಿಗಳನ್ನು ಸಿಡಿಸಿ, ಅಬ್ಬರದ ಸಂಗೀತ ಹಾಕಲಾಗಿದೆ. ಸುಪ್ರೀಂ ಕೋರ್ಟ್ ಆದೇಶಗಳು ಮತ್ತು ಕಾನೂನು ನಿಯಮಗಳನ್ನು ಬಹಿರಂಗವಾಗಿ ಉಲ್ಲಂಘಿಸಲಾಗಿದೆ ಎಂದು ರಮ್ಯಾ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೆಂಗಳೂರು ನಗರ ಪೊಲೀಸರಿಗೆ ಸಾಮಾಜಿಕ ಜಾಲತಾಣದ ಮೂಲಕ ದೂರು ನೀಡಿ ಕಠಿಣ ಕ್ರಮಕ್ಕೆ ಆಗ್ರಹಿಸಿದ್ದಾರೆ.

ನಡುರಾತ್ರಿಯೂ ಪಟಾಕಿ ಸಿಡಿಸುತ್ತಿರುವ ಎರಡು ವಿಡಿಯೋ ತುಣುಕುಗಳನ್ನು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿರುವ ರಮ್ಯಾ, ಈಗ ಸುಮಾರು ಬೆಳಗಿನ ಜಾವ 3 ಗಂಟೆ. ಆದರೂ ಫನ್ ವರ್ಲ್ಡ್‌ನಲ್ಲಿ ಪಟಾಕಿಗಳನ್ನು ಸಿಡಿಸಲಾಗುತ್ತಿದೆ. ಜೋರಾಗಿ ಸಂಗೀತ ಹಾಕಲಾಗುತ್ತಿದೆ. ರಾತ್ರಿ

ದಸರಾ ಆನೆಗಳ ತಂಡವು (ಗಜಪಡೆ) ಗುರುವಾರ ಮೈಸೂರು ಅರಮನೆಯಿಂದ ತಮ್ಮ ಅರಣ್ಯ ಶಿಬಿರಗಳಿಗೆ ಮರಳುವ ಪ್ರಯಾಣವನ್ನು ಅಧಿಕೃತವಾಗಿ ಆರಂಭಿಸಿದೆ. ಸಾಂಪ್ರದಾಯಿಕ ವಿಧಿವಿಧಾನ, ಆನೆಗಳ ತೂಕ ಪರಿಶೀಲನೆ ಮತ್ತು ಮೈಸೂರು ಅರಮನೆ ಆವರಣದಿಂದ ಬೀಳ್ಕೊಡುವ ಔಪಚಾರಿಕ ಕಾರ್ಯಕ್ರಮಗಳೊಂದಿಗೆ ಈ ವಾಪಸಾತಿ ಪ್ರಕ್ರಿಯೆ ಪ್ರಾರಂಭವಾಯಿತು. ಅಲ್ಲಿಂದ ಆನೆಗಳು ವೀರನಹೊಸಹಳ್ಳಿ ಹಾಗೂ ಅರಣ್ಯದತ್ತ ಸಾಗುವ ಇತರ ಮಾರ್ಗಗಳ ಮೂಲಕ ತಮ್ಮ ನೆಲೆಗಳಿಗೆ ಪ್ರಯಾಣ ಬೆಳೆಸಿವೆ.

ರಾಜ್ಯ ಸರ್ಕಾರ ಪ್ರತ್ಯೇಕ ವಿದೇಶಾಂಗ ಸಚಿವಾಲಯ ಸೃಜಿಸಿ ಸಚಿವ ಸ್ಥಾನ ನೀಡಲಿ: ಶಾಸಕ ಬಿ.ಪಿ.ಹರೀಶ್ ವ್ಯಂಗ್ಯ

ಸಚಿವ ಮಲ್ಲಿಕಾರ್ಜುನ ರಾಜ್ಯದಲ್ಲಿರುವುದಕ್ಕಿಂತ ವಿದೇಶದಲ್ಲೇ ಹೆಚ್ಚು ಇರುತ್ತಾರೆ

ದಾವಣಗೆರೆ, ಅ.22: ತೋಟಗಾರಿಕೆ, ಗಣಿ ಮತ್ತು ಭೂವಿಜ್ಞಾನ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ರಾಜ್ಯಕ್ಕಿಂತ ವಿದೇಶದಲ್ಲೇ ಹೆಚ್ಚಾಗಿರುತ್ತಾರೆ. ರಾಜ್ಯ ಸರ್ಕಾರ ವಿದೇಶಾಂಗ ಸಚಿವಾಲಯ ಸೃಜನೆ ಮಾಡಿ ಸಚಿವ ಸ್ಥಾನ ನೀಡಿದರೆ ಅನುಕೂಲ ಎಂದು ಹರಿಹರದ ಬಿಜೆಪಿ ಶಾಸಕ ಬಿ.ಪಿ.ಹರೀಶ್ ವ್ಯಂಗ್ಯವಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬರ ಪರಿಸ್ಥಿತಿಯ ಸಂದರ್ಭದಲ್ಲಿ ಕೂಡ ಸಚಿವರು ಸಕ್ರಿಯವಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ವಿಧಾನಮಂಡಲದ ಅಧಿವೇಶನಕ್ಕೆ ನಿಮಿಷಗಳ ಲೆಕ್ಕದಲ್ಲಿ ಬಂದುಹೋಗುತ್ತಾರೆ. ಸಚಿವ ಸಂಪುಟ ಸಭೆಗಳಲ್ಲಿ ಕೂಡ ಅವರು ಪಾಲ್ಗೊಳ್ಳುವುದಿಲ್ಲ. ಇಂತಹವರನ್ನು ಸಚಿವ ಸಂಪುಟದಲ್ಲಿ ಇಟ್ಟುಕೊಂಡಿರುವ ಔಚಿತ್ಯವೇನು' ಎಂದು ಪ್ರಶ್ನಿಸಿದರು.

ಸಚಿವ ಮಲ್ಲಿಕಾರ್ಜುನ್ ಒಡೆತನದ ಕಾರ್ಖಾನೆಗಳಲ್ಲಿ ಅಕ್ರಮ ನಡೆದಿರುವುದು ರಾಜ್ಯ ಸರ್ಕಾರ ನೇಮಕ ಮಾಡಿದ ಸಮಿತಿಯ ತನಿಖೆಯಲ್ಲಿ ಖಚಿತವಾಗಿದೆ. ಆದರೂ, ಅವರ ವಿರುದ್ಧ ಕ್ರಮ ಕೈಗೊಳ್ಳಲು ಸರ್ಕಾರ ಮೀನಮೇಷ ಎಣಿಸುತ್ತಿದೆ. ಶಾಮನೂರು ಕುಟುಂಬದ ಶ್ರೀಮಂತಿಕೆ ಹಾಗೂ ಅಧಿಕಾರದ ದರ್ಪ ಮಿತಿಮೀರಿದೆ' ಎಂದು ಆರೋಪಿಸಿದರು.

ಭದ್ರಾ ನಾಲೆಯ ಮಲೇಬೆನ್ನೂರು ವ್ಯಾಪ್ತಿಯಲ್ಲಿ 15 ಎಂಜಿನಿಯರುಗಳ ಪೈಕಿ ನಾಲ್ವರು ಕಾರ್ಯನಿರ್ವಹಿಸುತ್ತಿದ್ದಾರೆ. ನಾಲೆಯ ನೀರು ನೋಡಿಕೊಳ್ಳುವ ಸಿಬ್ಬಂದಿಗೆ ನಾಲ್ಕು

ತಿಂಗಳಿಂದ ವೇತನ ನೀಡಿಲ್ಲ. ಇದಕ್ಕೆ ಸರ್ಕಾರದ ಖಜಾನೆಯಲ್ಲಿ ಹಣವಿಲ್ಲ. ಇಂತಹ ಸ್ಥಿತಿಯಲ್ಲಿ ನಾಲೆಗಳನ್ನು ಆಧುನೀಕರಣ ಮಾಡುವುದಾಗಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಸುಳ್ಳು ಮಾಹಿತಿ ನೀಡಿ ಜನರ ದಿಕ್ಕು ತಪ್ಪಿಸುತ್ತಿದ್ದಾರೆ' ಎಂದು ದೂರಿದರು.

ಭದ್ರಾ ಅಚ್ಚುಕಟ್ಟು ಪ್ರದೇಶಕ್ಕೆ ಮುಂಗಾರು ಹಂಗಾಮಿನ ಬೆಳೆಗೆ ನೀರು ಕೊಟ್ಟಿದ್ದರೆ ರೈತರು ಭತ್ತ ಬೆಳೆಯುತ್ತಿದ್ದರು. ಭತ್ತದ ಬೆಲೆ ಹೆಚ್ಚಳವಾಗಿದ್ದು, ರೈತರಿಗೂ ಅನುಕೂಲವಾಗುತ್ತಿತ್ತು. ಹಿರಿಯೂರು ಉಪಚುನಾವಣೆಯಲ್ಲಿ ಮತದಾರರನ್ನು ಒಲಿಸಿಕೊಳ್ಳುವ ಉದ್ದೇಶದಿಂದ ರಾಜ್ಯ ಸರ್ಕಾರ ಚಿತ್ರದುರ್ಗ ಜಿಲ್ಲೆಗೆ ನೀರು ಹರಿಸಿ ದಾವಣಗೆರೆ ಜಿಲ್ಲೆಯ ರೈತರಿಗೆ ಅನ್ಯಾಯ ಮಾಡಿದೆ. ಬೇಸಿಗೆ ಬೆಳೆಗೆ ಭದ್ರಾ ಜಲಾಶಯದಿಂದ ನೀರು ಹರಿಸದಿದ್ದರೆ ರೈತರು ಕ್ಷಮಿಸುವುದಿಲ್ಲ' ಎಂದು ಎಚ್ಚರಿಕೆ ನೀಡಿದರು.

ಕಲ್ಯಾಣ ಕನಾಟಕ ವಾಣಿಜ್ಯೋದ್ದಿಮೆ ಸಂಘದ ವಜ್ರಮಹೋತ್ಸವ

ಕೇಂದ್ರ ಆಹಾರ ನಾಗರಿಕ ಸರಬರಾಜು ಸಚಿವ ಪ್ರಹ್ಲಾದ ಜೋಶಿ ಅವರಿಗೆ ಆಹ್ವಾನ

ಕಲಬುರಗಿ, ಅ. 22: ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಕೆಕೆಸಿಸಿಐ) ಅಧ್ಯಕ್ಷ ಶರಣಬಸಪ್ಪ ಪಪ್ಪಾ ಹಾಗೂ ಗೌರವ ಕಾರ್ಯದರ್ಶಿ ಶಿವರಾಜ್ ವಿ. ಇಂಗಿನಶೆಟ್ಟಿ ಅವರು, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರನ್ನು ನವದೆಹಲಿಯಲ್ಲಿ ಭೇಟಿ ಮಾಡಿ, ಸಂಸ್ಥೆಯ ವಜ್ರಮಹೋತ್ಸವದ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ನೆರವೇರಿಸಬೇಕೆಂದು ಆಹ್ವಾನ ನೀಡಿದರು.

ಕಲ್ಯಾಣ ಕರ್ನಾಟಕ ವಾಣಿಜ್ಯೋದ್ದಿಮೆ ಸಂಘದ ವಜ್ರಮಹೋತ್ಸವವು ನವೆಂಬರ್ 28, 29 ಮತ್ತು 30ರಂದು ಮೂರುದಿನಗಳ ವರೆಗೆ ಕಲಬುರಗಿಯಲ್ಲಿ ನಡೆಯಲಿದ್ದು, ಕೇಂದ್ರ ಸರ್ಕಾರದ ವ್ಯಾಪಾರ, ಆಹಾರ ಮತ್ತು ಸಾರ್ವಜನಿಕ ವಿತರಣೆ, ನವೀಕರಣ ಹಾಗೂ ನವೀಕರಿಸಬಹುದಾದ ಇಂಧನ ಮತ್ತು ಶಿಕ್ಷಣ ಸಚಿವರಾದ ಪ್ರಲ್ಹಾದ್ ಜೋಶಿ ಅವರನ್ನು ಉದ್ಘಾಟನಾ ಸಮಾರಂಭಕ್ಕೆ ಆಹ್ವಾನಿಸಿದರು. ಕೆಕೆಸಿಸಿಐ ಸಂಸ್ಥೆಯ 60 ವರ್ಷಗಳ ಪಯಣದ ಸ್ಮರಣಾರ್ಥ ನಡೆಯಲಿರುವ ಈ ಮೂರು ದಿನಗಳ ಕಾರ್ಯಕ್ರಮದಲ್ಲಿ ಕೈಗಾರಿಕಾ ಪ್ರದರ್ಶನ, ರಾಜ್ಯಮಟ್ಟದ ಸಮಾವೇಶ, ಉದ್ಯೋಗ ಮೇಳ ಹಾಗೂ ಸಂಘ ಸಂಸ್ಥೆಗಳ ದಿನಾಚರಣೆ ನಡೆಯಲಿವೆ. ಈ ಸಂದರ್ಭದಲ್ಲಿ ಭಾಗವಹಿಸುವ ಪ್ರದರ್ಶಕರ ಅಭಿವೃದ್ಧಿಗೆ ಬೆಂಬಲ ನೀಡುವಂತೆ ವಿವಿಧ ನಾಯಕರು ಹಾಗೂ ಗಣ್ಯರನ್ನು ಸಂಸ್ಥೆ ಆಹ್ವಾನಿಸುತ್ತಿದೆ.

ಭೇಟಿಯ ವೇಳೆ ವಿಶೇಷವಾಗಿ ಸಣ್ಣ, ಅತಿಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಬೆಳವಣಿಗೆ ಹಾಗೂ ಉದ್ಯಮಗಳ ಅಭಿವೃದ್ಧಿಗೆ ಸಂಬಂದಿಸಿದ ವಿಷಯಗಳ ಕುರಿತು ಚರ್ಚಿಸಲಾಯಿತು. ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಸರಿಯಾದ ಎಫ್ಆರ್‌ಪಿ ಬೆಲೆ ಪಾವತಿಯಾಗುವಂತೆ ಕ್ರಮ ಕೈಗೊಳ್ಳುವುದು ಹಾಗೂ ಮೆಕ್ಕೆಜೋಳದಿಂದ ಕಬ್ಬು ಬೆಳೆಗಾರರಿಗೆ ಆಗುತ್ತಿರುವ ಸಮಸ್ಯೆಗಳ ಬಗ್ಗೆಯೂ ಗಮನ ಸೆಳೆಯಲಾಯಿತು. ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಬಗೆಹರಿಸಲು ಕೇಂದ್ರ ಸರ್ಕಾರ ಸಕಾರಾತ್ಮಕ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದರು. ಮಾತುಕತೆ ವೇಳೆ ಎಲ್ಲ ಸಹಕಾರದಿಂದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕೆಂದು ಅವರು ಸಲಹೆ ನೀಡಿದರು.

ಇತರ ಕಬ್ಬು ಬೆಳೆವ ರಾಜ್ಯಗಳಲ್ಲಿ ಕೇಂದ್ರ ನಿಗದಿಪಡಿಸಿದ ಎಫ್ಆರ್‌ಪಿ ಬೆಲೆಗಿಂತ ಹೆಚ್ಚಿನ ರಾಜ್ಯ ಸಹಾಯ ಬೆಲೆ (ಎಸ್ಎಪಿ) ನೀಡಿ ರೈತರಿಗೆ ಉತ್ತೇಜನ ನೀಡಲಾಗುತ್ತಿದೆ ಎಂಬುದನ್ನು ಸಚಿವರ ಗಮನಕ್ಕೆ ತರಲಾಯಿತು. ಎಫ್ಆರ್‌ಪಿ ಪಾವತಿ ಸಮಸ್ಯೆಗಳ ಕುರಿತು ಕಾನೂನುಬದ್ಧ ಕ್ರಮ ಕೈಗೊಳ್ಳುವ ಅಗತ್ಯವನ್ನೂ ವಿವರಿಸಲಾಯಿತು. ಭೇಟಿ ಮತ್ತು ಚರ್ಚೆಗೆ ಅವಕಾಶ ನೀಡಿದ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಕೆಕೆಸಿಸಿಐ ಕೃತಜ್ಞತೆ ಸಲ್ಲಿಸಿದೆ. ರೈತರ ಹಿತ ಕಾಪಾಡುವುದು ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಟ್ಟಾಗಿ ಕೆಲಸ ಮಾಡಬೇಕೆಂದು ಸಂಸ್ಥೆ ತಿಳಿಸಿದೆ.

ಯಾವ ಕಾರಣಕ್ಕಾಗಿ ನಮ್ಮನ್ನು ತಡೆಯಲಾಯಿತು ಎನ್ನುವುದು ತಿಳಿಯಬೇಕು: ಕೆ.ಎಸ್.ಬಸವಂತಪ್ಪ

ದಾವಣಗೆರೆ, ಅ.22: ಮೈಸೂರು ದಸರಾ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಿಂದೆ ತೆರಳುತ್ತಿದ್ದ ಸಚಿವರನ್ನು ಭದ್ರತಾ ಕಾರಣಗಳಿಗೆ ಎಸ್ಪಿ ರಿಷ್ಯಂತ್ ಅವರು ತಡೆದಿದ್ದು ಇದೀಗ ಹೊಸ ವಿವಾದಕ್ಕೆ ಕಾರಣವಾಗಿದ್ದು, ಈ ಬಗ್ಗೆ ದಾವಣಗೆರೆಯಲ್ಲಿ ಸಚಿವ ಕೆ.ಎಸ್. ಬಸವಂತಪ್ಪ ಮಹತ್ವದ ಹೇಳಿಕೆ ನೀಡಿದ್ದಾರೆ.

ನಗರದಲ್ಲಿ ಮಾಧ್ಯಮಗಳ ಜತೆ ಮಾತನಾಡಿ, ನಮ್ಮನ್ನು ತಡೆದ ವಿಚಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗಂಭೀರವಾಗಿ ಪರಿಗಣಿಸಿದ್ದಾರೆ. ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದ್ದಾರೆ, ಅಲ್ಲದೆ ಈ ಬಗ್ಗೆ ತನಿಖೆ ಮಾಡಿ ವರದಿ ನೀಡುವಂತೆಯೂ ಸೂಚಿಸಿದ್ದಾರೆ ಎಂದು ತಿಳಿಸಿದರು.

ಅಲ್ಲಿ ಮುಖ್ಯಮಂತ್ರಿಗಳು ಮಾತ್ರ ಪ್ರವೇಶಿಸಬೇಕು ಎಂಬ ಶಿಷ್ಟಾಚಾರವಿದ್ದಿದ್ದರೆ ನಮಗೆ ಮೊದಲೇ ಗೊತ್ತಾಗುತ್ತಿತ್ತು. ಶಿಷ್ಟಾಚಾರವಿದ್ದಾಗಲೂ ನಾವು ಏಕೆ ಸಿಎಂ ಹಿಂದೆ ಹೋಗುತ್ತಿದ್ದೆವು. ಆದರೆ ಆ ರೀತಿ ಯಾವುದೇ ಶಿಷ್ಟಾಚಾರ ಇರಲಿಲ್ಲ. ನಮ್ಮನ್ನು ಯಾತಕ್ಕಾಗಿ ತಡೆಯಲಾಯಿತು ಎನ್ನುವುದು ಗೊತ್ತಾಗಬೇಕು. ಈ ಬಗ್ಗೆ ಪೊಲೀಸ್ ಅಧಿಕಾರಿ ವಿರುದ್ಧ ತನಿಖೆ ಆಗಬೇಕು ಎಂದರು.

ಕಾರಿನಲ್ಲಿ ಮೈಸೂರು ಅರಮನೆ ಬಳಿ ಬಂದ ಸಿಎಂ ಈ ವೇಳೆ ಸಿಎಂ ಜೊತೆಯಲ್ಲೇ ಸಚಿವ ಶಿವರಾಜ ತಂಗಡಗಿ ಸೇರಿ ಇತರೆ ಮುಖಂಡರು ಬಂದಿದ್ದರು. ಸಿಎಂ ಕಾರಿನಿಂದ

ಇಳಿದು ಒಳಗೆ ಪ್ರವೇಶಿಸುತ್ತಿದ್ದಂತೆ ಅಲ್ಲಿ ಪೊಲೀಸರು ಬಿಗಿಭದ್ರತೆ ಕೈಗೊಂಡಿದ್ದರು. ಈ ವೇಳೆ ಒಳಗೆ ಸಿಎಂ ಹೊರತುಪಡಿಸಿ ಸಚಿವ ತಂಗಡಗಿಯನ್ನು ತಡೆದು ನಿಲ್ಲಿಸಿದರು. ಇದರಿಂದ ತುಸು ಮುಜುಗರ ಅನುಭವಿಸಿದ ಸಚಿವ ತಂಗಡಗಿ ಪೊಲೀಸ್ ಅಧಿಕಾರಿಯ ವಿರುದ್ಧ ಗರಂ ಆದ ಘಟನೆಯೂ ವಿಡಿಯೋದಲ್ಲಿ ದಾಖಲಾಗಿದೆ.

ನಾರಾಯಣಪುರ ಜಲಾಶಯದಲ್ಲಿ ಕಲಬುರಗಿ ಜಿಲ್ಲೆಗೆ 6 ಟಿ.ಎಂ.ಸಿ ನೀರು ಕಾಯ್ದಿಸುವಂತೆ ಪ್ರಸ್ತಾವನೆ: ಡಿಸಿ

ಕಲಬುರಗಿ, ಅ. 22: ಪ್ರಸ್ತುತ ಬರಗಾಲದ ಛಾಯೆ ಮತ್ತು ಮುಂಬರುವ ಬೇಸಿಗೆ ಅವಧಿಯಲ್ಲಿ ಕಲಬುರಗಿ ನಗರ ಹಾಗೂ ಜಿಲ್ಲೆಯ ಗ್ರಾಮೀಣ ಪ್ರದೇಶಗಳ ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ಮುನ್ನೆಚ್ಚರಿಕಾ ಕ್ರಮವಾಗಿ 6.00 ಟಿ.ಎಂ.ಸಿ.ಎಫ್‌ಟಿ ನೀರನ್ನು ನಾರಾಯಣಪುರ ಜಲಾಶಯದಿಂದ ಹರಿಸುವ ಸಂಬಂಧ ಕಲಬುರಗಿ ಜಿಲ್ಲೆಗಾಗಿ ಕಾಯ್ದಿರಿಸುವಂತೆ ಕೃಷ್ಣಾ ಮೇಲ್ದಂಡೆ ಯೋಜನೆಯ ನೀರಾವರಿ ಸಲಹಾ ಸಮಿತಿಯ ಸಭೆಗೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಮುಂಗಾರು ಮತ್ತು ಹಿಂಗಾರು ಎರಡೂ ಮಳೆಗಳು ಕೈಕೊಟ್ಟಿದ್ದರಿಂದ ಈಗಾಗಲೇ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಮುಂದಿನ ದಿನಗಳಲ್ಲಿ ನೀರಿನ ಸಮಸ್ಯೆ ಇನ್ನಷ್ಟು ಉಲ್ಬಣಗೊಳ್ಳಲಿದೆ. ಆದದ್ದರಿಂದ ನಾರಾಯಣಪುರ ಜಲಾಶಯದ ನೀರು ಪಡೆಯದ ಹೊರತು ಅನ್ಯ ಮಾರ್ಗವಿಲ್ಲ. ಆದ್ದರಿಂದ ಬೆಂಗಳೂರಿನಲ್ಲಿ ಸಣ್ಣ ಕೈಗಾರಿಕೆ ಹಾಗೂ

ಸಾರ್ವಜನಿಕ ಉದ್ದಿಮೆಗಳ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆಯ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ್ ಅಧ್ಯಕ್ಷತೆಯಲ್ಲಿ ನಡೆದ 2026–27ನೇ ಸಾಲಿನ ಮುಂಗಾರು ಹಂಗಾಮಿನ ಉಳಿದ ಅವಧಿ ಹಾಗೂ ಹಿಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ವಿಡಿಯೋ ಸಂವಾದದ ಮೂಲಕ ಭಾಗವಹಿಸಿದ ಜಿಲ್ಲಾಧಿಕಾರಿಗಳು, ಜಿಲ್ಲೆಯ ಕುಡಿಯುವ ನೀರಿನ ಅಗತ್ಯ ಕುರಿತು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಕಲಬುರಗಿ ಮಹಾನಗರ ಪಾಲಿಕೆ, ಅಫಜಲಪುರ ಪುರಸಭೆ, ಭೀಮಾ ಏತ ನೀರಾವರಿ ಯೋಜನೆ, ಜೇವರ್ಗಿ ಪಟ್ಟಣ, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಹಾಗೂ ಸಣ್ಣ ನೀರಾವರಿ ಇಲಾಖೆ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳು ಸಲ್ಲಿಸಿರುವ ಬೇಡಿಕೆಯನ್ವಯ, ಕಲಬುರಗಿ ನಗರಕ್ಕೆ 2.50 ಟಿ.ಎಂ.ಸಿ., ಭೀಮಾ ನದಿ ದಡದ ಗ್ರಾಮಗಳಿಗೆ 1.50 ಟಿ.ಎಂ.ಸಿ., ಅಫಜಲಪುರ ನಗರಕ್ಕೆ 1.00 ಟಿ.ಎಂ.ಸಿ., ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಗೆ 0.40 ಟಿ.ಎಂ.ಸಿ. ಹಾಗೂ ಜೇವರ್ಗಿ ಮತ್ತು ಯಡ್ರಾಮಿ ತಾಲ್ಲೂಕುಗಳ ಕೆರೆಗಳನ್ನು ಅವಲಂಬಿಸಿರುವ ಗ್ರಾಮಗಳು ಮತ್ತು ಪಟ್ಟಣಗಳ ಕುಡಿಯುವ ನೀರಿನ ಅಗತ್ಯತೆಗಾಗಿ ತಲಾ 0.30 ಟಿ.ಎಂ.ಸಿ.ಯಂತೆ ಒಟ್ಟು 6.00 ಟಿ.ಎಂ.ಸಿ. ನೀರಿನ ಅವಶ್ಯಕತೆ ಇದೆ ಎಂದು ನೀರಾವರಿ ಸಲಹ ಸಮಿತಿ ಸಭೆಯ ಗಮನಕ್ಕೆ ತರಲಾಗಿದೆ. ಇಂದಿನ ಪರಿಸ್ಥಿತಿಯಿಂದ ಮುಂದಿನ ಜೂನ್ ವರೆಗೆ ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಜನ ಮತ್ತು ಜಾನುವಾರುಗಳ ಅಗತ್ಯತೆಗಳಿಗೆ ಆದ್ಯತೆ ನೀಡುವ ಉದ್ದೇಶದಿಂದ ಈ ನೀರಿನ ಪ್ರಮಾಣವನ್ನು ನಾರಾಯಣಪುರ ಜಲಾಶಯದಿಂದ ಕಾಯ್ದಿರಿಸುವ ಕುರಿತು ಸಮರ್ಪಕ ಪ್ರಸ್ತಾವನೆ ಮಂಡಿಸಲಾಗಿದೆ ಎಂದು ಜಿಲ್ಲಾದಿಕಾರಿ ಇಕ್ರಮ್ ಶರೀಫ್ ಅವರು ತಿಳಿಸಿದ್ದಾರೆ.

ಮಕ್ಕಳಿಗೆ ಧರ್ಮದ ಮಾರ್ಗ

ತೋರಿಸಬೇಕು: ಹಾರಿಕಾ ಮಂಜುನಾಥ

ಬೀದರ್, ಅ. 22: ಪಾಲಕರು ಮಕ್ಕಳಿಗೆ ಧರ್ಮದ ಮಾರ್ಗ ತೋರಿಸಬೇಕು. ಧರ್ಮದಿಂದ ನಡೆದುಕೊಳ್ಳಬೇಕು. ಧರ್ಮ ಎಂದರೆ ಸತ್ಯ ಮಾರ್ಗ ಎಂಬುದನ್ನು ಮಕ್ಕಳಿಗೆ ಮನವರಿಕೆ ಮಾಡಬೆಕೆಂದು ಚಿಂತಕಿ ಹಾರಿಕಾ ಮಂಜುನಾಥ ಹೇಳಿದರು.

ನಗರದ ಚಿದ್ರಿಯ ಬೀರಲಿಂಗೇಶ್ವರ ದೇವಸ್ಥಾನದಲ್ಲಿ ನವರಾತ್ರಿ ಹಾಗೂ ದಸರಾ ಪ್ರಯುಕ್ತ ಜೈ ಮಾತಾ ದಿ ಸೇವಾ ಸಂಘದ ವತಿಯಿಂದ ಆಯೋಜಿಸಿದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಾಯಂದಿರು ಮಕ್ಕಳಿಗೆ ರಾಮಾಯಣ, ಮಹಾಭಾರತ ಕಥೆ ಹಾಗೂ ಭಗವದ್ಗೀತೆ ಶ್ಲೋಕಗಳನ್ನು ಹೇಳಬೇಕು. ಸತ್ಯ, ನ್ಯಾಯದ ದಾರಿಯಲ್ಲಿ ನಡೆಯಲು ಪ್ರೇರಣೆ ನೀಡಬೇಕು. ಹಿಂದೂಗಳು ತಮ್ಮ ಶ್ರೇಷ್ಠ ಸಂಸ್ಕೃತಿಯನ್ನು ಪಾಲಿಸಬೇಕು. ಧರ್ಮ ರಕ್ಷಣೆಗೆ ಒಂದಾಗಬೇಕು ಎಂದರು. ಬಿಜೆಪಿಯ ಕಲಬುರಗಿ ವಿಭಾಗ ಸಹ ಪ್ರಭಾರಿ ಈಶ್ವರ ಸಿಂಗ್ ಠಾಕೂರ ಮಾತನಾಡಿ, ಹಿಂದೂ ಸಂಸ್ಕೃತಿಯನ್ನು ಉಳಿಸಿ, ಬೆಳೆಸುವ ಹೊಣೆ ಎಲ್ಲರ ಮೇಲಿದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆಯರು, ಸಭೆ, ಸಮಾರಂಭಗಳಲ್ಲಿ ಊಟ ಬಡಿಸುವ ಮಹಿಳೆಯರನ್ನು ಗೌರವಿಸಲಾಯಿತು.

ಬೀದರ್ ರಾಮಲೀಲಾ ಉತ್ಸವಕ್ಕೆ ಮನಸೋತ ಜನ

46 ಅಡಿ ರಾವಣನ ಪ್ರತಿಕೃತಿ ದಹನ

ಬೀದರ್, ಅ. 22: ಇಲ್ಲಿನ ಶ್ರೀ ರಾಮಲೀಲಾ ಉತ್ಸವ ಸಮಿತಿಯ ವತಿಯಿಂದ ನಗರದ ಸಾಯಿಶಾಲೆ ಮೈದಾನದಲ್ಲಿ ವಿಜಯದಶಮಿ ಅಂಗವಾಗಿ ರಾತ್ರಿ ಏರ್ಪಡಿಸಿದ್ದ ರಾಮಲೀಲಾ ಹಾಗೂ ರಾವಣ ದಹನ ಕಾರ್ಯಕ್ರಮ ಜನರ ಮನಸೂರೆಗೊಳಿಸಿತು. ತೆರೆದ ವೇದಿಕೆಯಲ್ಲಿ ಝಗಮಗಿಸುವ ವಿದ್ಯುತ್ ದೀಪಗಳ ಬೆಳಕಿನಲ್ಲಿ ಶ್ರೀರಾಮನ ಕುರಿತ ನೃತ್ಯರೂಪಕಗಳು ಗಮನ ಸೆಳೆದವು.

ಜಿಲ್ಲೆಯ ವಿವಿಧ ಕಲಾ ತಂಡಗಳು, ನೃತ್ಯ ಶಾಲೆಯ ವಿದ್ಯಾರ್ಥಿಗಳು ಹಾಗೂ ಶಾಲಾ ಕಾಲೇಜಿನ ವಿದ್ಯಾರ್ಥಿನಿಯರು ಸಮೂಹ ನೃತ್ಯ, ಏಕವ್ಯಕ್ತಿ ನೃತ್ಯ ಪ್ರಸ್ತುತಪಡಿಸಿ, ಎಲ್ಲರ ಮೆಚ್ಚುಗೆಗೆ ಪಾತ್ರರಾಗಿ ಚಪ್ಪಾಳೆ ಗಿಟ್ಟಿಸಿದರು.

ಕನ್ನಡ, ಹಿಂದಿ ಹಾಗೂ ಮರಾಠಿ ಜನಪದ ಗೀತೆಗಳಿಗೂ ಹೆಜ್ಜೆ ಹಾಕಿದರು. ಶ್ರೀರಾಮಚಂದ್ರನು ರಾವಣನನ್ನು ಸಂಹರಿಸುವ ನೃತ್ಯ ರೂಪಕ ಸಭಿಕರ ಮೆಚ್ಚುಗೆಗೆ ಪಾತ್ರವಾಯಿತು. ಅಂಬಾ ಭವಾನಿ ನೃತ್ಯರೂಪಕವೂ ರಂಜಿಸಿತು. ರಾಮಲೀಲಾ ಉತ್ಸವ ನಡೆಸಿಕೊಟ್ಟ ಕಲಾವಿದರು ಅಲಂಕರಿಸಿದ ತೆರೆದ ವಾಹನದಲ್ಲಿ ಬಂದರು. ಅವರಿಗೆ

ಭವ್ಯ ಸ್ವಾಗತ ನೀಡಲಾಯಿತು.

ಬಳಿಕ 46 ಅಡಿ ಎತ್ತರದ ರಾವಣನ ಪ್ರತಿಕೃತಿ ಹಾಗೂ ಅದರ ಮೇಲೆ ಅಂಟಿಸಿದ್ದ ಜಿರಳೆ ಚಿತ್ರ ದಹಿಸಲಾಯಿತು. ಪಟಾಕಿಗಳನ್ನು ಸಿಡಿಸಿ, ಜೈಶ್ರೀರಾಮ್, ಜೈಶ್ರೀರಾಮ್ ಎಂದು ಘೋಷಣೆಗಳನ್ನು ಹಾಕಿದರು.

ಶ್ರೀರಾಮಲೀಲಾ ಉತ್ಸವ ಸಮಿತಿಯ ಸ

ಕಿಷ್ಕಿಂಧ ವಿಶ್ವವಿದ್ಯಾಲಯದಲ್ಲಿ KU-VKF ಎಕ್ಸ್‌ಪೋರ್ಟ್ ಕನೆಕ್ಟ್ ಸಹಾಯ ಕೇಂದ್ರ ಆರಂಭ

ಬಳ್ಳಾರಿ ಅ 22– KUVKF ಎಕ್ಸ್‌ಪೋರ್ಟ್ ಕನೆಕ್ಟ್ ಉಪಕ್ರಮದ ಮುಂದುವರಿದ ಭಾಗವಾಗಿ, ಕಿಷ್ಕಿಂಧ ವಿಶ್ವವಿದ್ಯಾಲಯದಲ್ಲಿ ವಿಶೇಷ ಎಕ್ಸ್‌ಪೋರ್ಟ್ ಕನೆಕ್ಟ್ ಸಹಾಯ ಕೇಂದ್ರವು ಕಾರ್ಯಾರಂಭ ಮಾಡಿದೆ. ರಫ್ತು ಕ್ಷೇತ್ರಕ್ಕೆ ಸಂಬಂಧಿಸಿದ ಹಿತಾಸಕ್ತಿದಾರರ ವಿಚಾರಣೆಗಳನ್ನು ಸ್ವೀಕರಿಸಿ, ಅವರ ಅಗತ್ಯಗಳನ್ನು ದಾಖಲಿಸಿ, ಸಂಬಂಧಿತ ತಜ್ಞರು ಹಾಗೂ ಸಂಸ್ಥೆಗಳೊಂದಿಗೆ ಸಂಪರ್ಕ ಕಲ್ಪಿಸಲು ಕೇಂದ್ರದಲ್ಲಿ ಸಂಯೋಜಕರನ್ನು ನಿಯೋಜಿಸಲಾಗಿದೆ.ಈ ಸಹಾಯ ಕೇಂದ್ರವು ರೈತರು, ರೈತ ಉತ್ಪಾದಕ ಸಂಸ್ಥೆಗಳು (FPOs), ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು (MSMEs), ಕೃಷಿ ನವೋದ್ಯಮಗಳು, ಆಹಾರ ಸಂಸ್ಕರಣಾ ಉದ್ಯಮಗಳು, ಉತ್ಪಾದಕರು, ಉದ್ಯಮಿಗಳು, ರಫ್ತುದಾರರು, ರಫ್ತು ಪ್ರಕ್ರಿಯೆ ಆರಂಭಿಸಲು ಬಯಸುವವರು ಹಾಗೂ ಸರಕು ವ್ಯಾಪಾರಿಗಳಿಗೆ ಅಗತ್ಯ ಮಾರ್ಗದರ್ಶನ ಮತ್ತು ನೆರವು ಒದಗಿಸಲಿದೆ.ಸಹಾಯ ಕೇಂದ್ರದ ಮೂಲಕ ಲಭ್ಯವಿರುವ ಪ್ರಮುಖ ಸೇವೆಗಳು:

– ರಫ್ತು ನಿಯಮಾನುಸರಣೆ ಮತ್ತು ದಾಖಲೀಕರಣ

– ಗುಣಮಟ್ಟ ಪರೀಕ್ಷೆ ಮತ್ತು ಪ್ರಮಾಣೀಕರಣ

– ಸಂಸ್ಕರಣೆ ಮತ್ತು ಮೌಲ್ಯವರ್ಧನೆ

– ಪ್ಯಾಕೇಜಿಂಗ್, ಲೇಬಲಿಂಗ್ ಮತ್ತು ಬ್ರಾ್ಯಂಡಿಂಗ್

– ಮಾರುಕಟ್ಟೆ ಮಾಹಿತಿ ಮತ್ತು ಖರೀದಿದಾರರ ಸಂಪರ್ಕ

– ರಫ್ತು ಹಣಕಾಸು ಮತ್ತು ಪಾವತಿ ಅಪಾಯ ನಿರ್ವಹಣೆ

– ತಂತ್ರಜ್ಞಾನ ಹಾಗೂ ತಜ್ಞರ ಮಾರ್ಗದರ್ಶನಕಿಷ್ಕಿಂಧ ವಿಶ್ವವಿದ್ಯಾಲಯವು ಈ ಉಪಕ್ರಮಕ್ಕೆ ಅಗತ್ಯವಾದ ಜ್ಞಾನ, ಸಂಶೋಧನೆ ಮತ್ತು ತಾಂತ್ರಿಕ ನೆರವು

ಒದಗಿಸಲಿದೆ. ವಿಷನ್ ಕರ್ನಾಟಕ ಫೌಂಡೇಶನ್ (VKF) ರಫ್ತು ಉತ್ತೇಜನ ಸಂಸ್ಥೆಗಳು, ಸರ್ಕಾರಿ ಇಲಾಖೆಗಳು, ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಗಳು, ಬ್ಯಾಂಕುಗಳು, ವಿಮಾ ಸಂಸ್ಥೆಗಳು, ಮಾರ್ಗದರ್ಶಕರು ಹಾಗೂ ಮಾರುಕಟ್ಟೆ ಜಾಲಗಳೊಂದಿಗೆ ಸಂಪರ್ಕ ಕಲ್ಪಿಸುವ ಕಾರ್ಯವನ್ನು ನಿರ್ವಹಿಸಲಿದೆ.

ಸಹಾಯ ಕೇಂದ್ರದ ವಿಳಾಸ:
ಕಿಷ್ಕಿಂಧ ವಿಶ್ವವಿದ್ಯಾಲಯ,
ಮೌಂಟ್ ವ್ಯೂ ಕ್ಯಾಂಪಸ್, ಸಿಂಧಿಗೇರಿ ಸಮೀಪ,
ಬಳ್ಳಾರಿ–ಸಿರುಗುಪ್ಪ ರಸ್ತೆ, ಬಳ್ಳಾರಿ.
ದೂರವಾಣಿ: +91–8393299040ರಫ್ತು ಸಂಬಂಧಿತ ಮಾಹಿತಿ, ಮಾರ್ಗದರ್ಶನ ಮತ್ತು ನೆರವು ಅಗತ್ಯವಿರುವ ಹಿತಾಸಕ್ತಿದಾರರು ಮೇಲ್ಕಂಡ ದೂರವಾಣಿ ಸಂಖ್ಯೆಯ ಮೂಲಕ ಸಹಾಯ ಕೇಂದ್ರವನ್ನು ಸಂಪರ್ಕಿಸಬಹುದು ಎಂದು ಕಿಷ್ಕಿಂಧ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ. ಯು. ಈರಣ್ಣ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಭ್ರಮ ಸಡಗರದಿಂದ ನಡೆದ ಹೊನ್ನೆಬೈಲ್ ಗ್ರಾಮದೇವರ ಹೊಸ್ತಿನ ಹಬ್ಬ

ಅಂಕೋಲಾ, ಅ.22– ಗ್ರಾಮೀಣ ಭಾಗದಲ್ಲಿ ನಡೆಯುವ ವಿಶೇಷ ಹಬ್ಬಗಳಲ್ಲಿ ಹೊಸ್ತಿನ ಹಬ್ಬವು ಕೂಡ ಮಹತ್ವವಾದದ್ದು. ಹೊನ್ನೆಬೈಲ್ ಗ್ರಾಮ ದೇವರಾದ ಶ್ರೀ ಬೊಮ್ಮಯ್ಯ, ಮಾಣಿಬೀರ, ಕುಸ್ಲೆದೇವರ ಹೊಸ್ತಿನ ಹಬ್ಬವು ಮಂಗಳವಾರ ಸಂಭ್ರಮ, ಸಡಗರದಿಂದ ನಡೆಯಿತು.

ಮೂರು ಕಳಸಗಳು ದೇವಸ್ಥಾನದ ಒಳಗೆ ತೆಗೆದುಕೊಂಡು ಹೋಗಿ ಅಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಕಳಸ ಹೊತ್ತ ಮೂವರಿಗೆ ಹೊನ್ನೆಬೈಲ್ ಟೆಂಪಲ್ ಟ್ರಸ್ಟ್ ಅಧ್ಯಕ್ಷ ಹನುಮಂತ ಬೊಮ್ಮು ಗೌಡ ಪ್ರಶ್ನೆಯನ್ನು ಕೇಳಿ ನಂತರ ಮಳೆ ಬೆಳೆಗಳು ಹಾಗೂ ಜನಜೀವನ ಉತ್ತಮವಾಗಿ ಸಾಗುವಂತೆ ದೇವರಲ್ಲಿ ವಿನಂತಿಸಿಕೊಂಡರು. ಕಳಸ ಹೊತ್ತ ಗುನಗರಿಗೆ ಮೈಭಾರ ಬಂದು ನಾನು ಎಲ್ಲವನ್ನು ನೋಡಿಕೊಳ್ಳುತ್ತೇನೆ ಎಂದು ಅಪ್ಪಣೆ ನೀಡಿತು. ಈ ಸಂದರ್ಭದಲ್ಲಿ ಹೊನ್ನೆಬೈಲ್ ಟೆಂಪಲ್ ಟ್ರಸ್ಟ್ ಅಧ್ಯಕ್ಷ ಹನುಮಂತ ಬೊಮ್ಮು ಗೌಡ, ಅರ್ಚಕರಾದ ವಿಠೋಬ ಗುನಗಾ, ಗುಣವಂತ ಗುನಗಾ, ಗಣಪತಿ ಗುನಗಾ, ಕಟಿಗೆದಾರರು ಸೇರಿದಂತೆ ಇತರರಿದ್ದರು.

ಬ್ರಹ್ಮಕುಮಾರೀಸ್ ಸಂಸ್ಥೆಯ ೧೦ನೇ ವಾರ್ಷಿಕೋತ್ಸವ

ಶೃಂಗಸಭೆ–2026ಕ್ಕೆ ಜಿ. ಶ್ರೀನಿವಾಸರೆಡ್ಡಿ ಆಯ್ಕೆ

ಬಳ್ಳಾರಿ ಅ 22: ಬ್ರಹ್ಮಕುಮಾರೀಸ್ ಸಂಸ್ಥೆಯ 90ನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಲಾಗುತ್ತಿರುವ 'ನವ ದಶಕೋತ್ಸವ' (Nava Dashakotsav) ಜಾಗತಿಕ ಶೃಂಗಸಭೆ– 2026 ಕಾರ್ಯಕ್ರಮದಲ್ಲಿ ಭಾಗವಹಿಸಲು ಬಳ್ಳಾರಿಯ ಜಿ. ಶ್ರೀನಿವಾಸ ರೆಡ್ಡಿ ಅವರಿಗೆ ಆಹ್ವಾನ ದೊರೆತಿದೆ.

ರಾಜಸ್ಥಾನದ ಅಬು ರಸ್ತೆಯಲ್ಲಿರುವ ಬ್ರಹ್ಮಕುಮಾರೀಸ್ ಸಂಸ್ಥೆಯ ವಿಶ್ವ ಪ್ರಧಾನ ಕಚೇರಿ, ಶಾಂತಿವನ ಕ್ಯಾಂಪಸ್‌ನಲ್ಲಿ ಅಕ್ಟೋಬರ್ 23ರಿಂದ 26ರವರೆಗೆ ಈ ಜಾಗತಿಕ ಶೃಂಗಸಭೆ ನಡೆಯಲಿದೆ. ಭಾರತ ಸೇರಿದಂತೆ ವಿದೇಶಗಳ ಅನೇಕ ಗಣ್ಯರು, ಆಧ್ಯಾತ್ಮಿಕ ಚಿಂತಕರು, ಶಿಕ್ಷಣ ತಜ್ಞರು ಹಾಗೂ ಸಮಾಜ ಸೇವಕರು ಈ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ. ಆಧ್ಯಾತ್ಮಿಕ ಮೌಲ್ಯಗಳು, ವಿಶ್ವಶಾಂತಿ, ಮಾನವೀಯತೆ, ಸಹಬಾಳ್ವೆ ಮತ್ತು ಜಾಗತಿಕ ಸೌಹಾರ್ದತೆಯನ್ನು ಉತ್ತೇಜಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

ಬಳ್ಳಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜು ಹಾಗೂ ಲಯನ್ಸ್ ಕ್ಲಬ್ ಬಳ್ಳಾರಿ ಕಂಟೋನ್ಮೆಂಟ್‌ನೊಂದಿಗೆ ಗುರುತಿಸಿಕೊಂಡಿರುವ ಜಿ. ಶ್ರೀನಿವಾಸ ರೆಡ್ಡಿ ಅವರು ಈ ಪ್ರತಿಷ್ಠಿತ ಜಾಗತಿಕ ಸಮಾವೇಶದಲ್ಲಿ ಭಾಗವಹಿಸುತ್ತಿರುವುದು ಬಳ್ಳಾರಿಗೆ ಹೆಮ್ಮೆಯ ಸಂಗತಿಯಾಗಿದೆ.

ನಾಳೆಯಿಂದ 'ಕಲ್ಯಾಣ ಪರ್ವ' ರಜತ ಮಹೋತ್ಸವ: ಹಂಸಲೇಖ ಚಾಲನೆ

ಬೀದರ್, ಅ. 22: ಬಸವ ಧರ್ಮ ಪೀಠ ಹಾಗೂ ಕಲ್ಯಾಣ ಪರ್ವ ಉತ್ಸವ ಸಮಿತಿ ವತಿಯಿಂದ ಅ. 24ರಿಂದ ಮೂರು ದಿನಗಳ ಕಾಲ ಬಸವಕಲ್ಯಾಣದ ಬಸವ ಮಹಾಮನೆ ಆವರಣದಲ್ಲಿ 25ನೇ ವರ್ಷದ 'ಕಲ್ಯಾಣ ಪರ್ವ' ರಜತ ಮಹೋತ್ಸವವನ್ನು ಅದ್ದೂರಿಯಾಗಿ ಆಚರಿಸಲು ಆಯೋಜಿಸಲಾಗಿದೆ ಎಂದು ಅಲ್ಲಮಪ್ರಭು ಶೂನ್ಯ ಪೀಠದ ಶ್ರೀ ಸಿದ್ಧರಾಮೇಶ್ವರ ಸ್ವಾಮೀಜಿ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲಿಂ. ಮಾತೆ ಮಹಾದೇವಿ ಅವರ ನೇತೃತ್ವದಲ್ಲಿ 2001ರಲ್ಲಿ ಆರಂಭವಾದ ಕಲ್ಯಾಣ ಪರ್ವವು 24 ವರ್ಷಗಳನ್ನು ಪೂರೈಸಿ ರಜತ ಮಹೋತ್ಸವದ ಸಂಭ್ರಮದಲ್ಲಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲದೆ ಮಹಾರಾಷ್ಟ್ರ, ತೆಲಂಗಾಣ, ತಮಿಳುನಾಡು, ಗುಜರಾತ್ ಸೇರಿದಂತೆ ವಿವಿಧ ರಾಜ್ಯಗಳಿಂದ ಸಾವಿರಾರು ಬಸವಾಭಿಮಾನಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದರು.

ಕೂಡಲಸಂಗಮದ ಬಸವ ಧರ್ಮ ಪೀಠದ ಪೀಠಾಧ್ಯಕ್ಷೆ ಡಾ. ಮಾತೆ ಗಂಗಾದೇವಿ ಅವರ ಸಾನ್ನಿಧ್ಯದಲ್ಲಿ ಅಂದು ಬೆಳಗ್ಗೆ 10ಕ್ಕೆ ನಡೆಯುವ ಕಲ್ಯಾಣ ಪರ್ವಕ್ಕೆ ಖ್ಯಾತ ಸಂಗೀತ ನಿರ್ದೇಶಕ ನಾದಬ್ರಹ್ಮ ಹಂಸಲೇಖ ಚಾಲನೆ ನೀಡುವರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಧ್ವಜಾರೋಹಣ ನೆರವೇರಿಸಲಿದ್ದು, ಶಾಸಕ ಶರಣು ಸಲಗರ ಗೌರವ ಅಧ್ಯಕ್ಷತೆ ವಹಿಸುವರು.

ಬಳಿಕ ಧರ್ಮ ಚಿಂತನಗೋಷ್ಠಿ ನಡೆಯಲಿದೆ. ಮಧ್ಯಾಹ್ನ 3.30ರಿಂದ 5.30ರವರೆಗೆ ರಾಷ್ಟ್ರೀಯ ಬಸವ ದಳದ ರಾಷ್ಟ್ರೀಯ ಸಮಾವೇಶ ಹಾಗೂ ಸಂಜೆ 6.30ಕ್ಕೆ '12ನೇ ಶತಮಾನದ ಅನುಭವ ಮಂಟಪದಲ್ಲಿ ಮಹಿಳೆಯರ ಸ್ಥಾನ' ವಿಷಯ ಕುರಿತು ಮಹಿಳಾ ಗೋಷ್ಠಿ ನಡೆಯಲಿದೆ. ವಿಧಾನ ಪರಿಷತ್ ಉಪಸಭಾಪತಿ ಉಮಾಶ್ರೀ ಉದ್ಘಾಟಿಸುವರು. ಮಾಜಿ ಸಚಿವ ಎಚ್. ಆಂಜನೇಯ ಅವರು ಹರಳಯ್ಯ ಸಮುದಾಯ ಭವನವನ್ನು ಲೋಕಾರ್ಪಣೆ ಮಾಡುವರು. ಅ. 25ರಂದು ವಿವಿಧ ಗೋಷ್ಠಿಗಳು: ಹಿರಿಯರಾದ ಬಸವರಾಜ ಬುಳ್ಳಾ ಮಾತನಾಡಿ, ಅ. 25ರಂದು ಬೆಳಗ್ಗೆ 7ಕ್ಕೆ ವಚನ ಸಾಹಿತ್ಯ ಮತ್ತು ಶರಣ ಧರ್ಮದ ರಕ್ಷಣೆಗಾಗಿ ಬಲಿದಾನ ಮಾಡಿದ 770 ಅಮರಗಣಂಗಳಿಗೆ ಶರಣ ವಂದನೆ ಸಲ್ಲಿಸಲಾಗುವುದು.

ಬೆಳಗ್ಗೆ 8ಕ್ಕೆ ಪ್ರಥಮ ಶೂನ್ಯ ಪೀಠಾ ರೋಹಣದ 841ನೇ ಸಂಸ್ಮರಣೆ ಹಾಗೂ ದ್ವಿತೀಯ ಶೂನ್ಯ ಪೀಠಾ ರೋಹಣದ 24ನೇ ವಾರ್ಷಿಕೋತ್ಸವ ಜರುಗಲಿದೆ ಎಂದರು.

ಬೆಳಗ್ಗೆ 10ಕ್ಕೆ 'ಬಸವಾದಿ ಪ್ರಮಥರು ಮತ್ತು ಸಾಮಾಜಿಕ ನ್ಯಾಯ' ವಿಷಯ ಕುರಿತು ಸಮಾಜ ಚಿಂತನಗೋಷ್ಠಿಯನ್ನು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಉದ್ಘಾಟಿಸುವರು. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಧ್ವಜಾರೋಹಣ ನೆರವೇರಿಸಲಿದ್ದಾರೆ.

ಮಧ್ಯಾಹ್ನ 3.30ಕ್ಕೆ ಮಹಾರಾಷ್ಟ್ರದ ಶರಣರು ಹಾಗೂ ಬಸವಾಭಿಮಾನಿಗಳಿಗಾಗಿ ವಿಶೇಷ ಮರಾಠಿ ಗೋಷ್ಠಿ ನಡೆಯಲಿದೆ. ಸಂಜೆ 6.30ಕ್ಕೆ ನಾಡಿನ ವಿವಿಧ ಮಠಾಧೀಶರ ಸಾನ್ನಿಧ್ಯದಲ್ಲಿ 'ಲಿಂಗಾಯತ ಧರ್ಮಕ್ಕೆ ಸಾಂವಿಧಾನಿಕ ಮಾನ್ಯತೆ: ಭವಿಷ್ಯದ ನಡೆ' ವಿಷಯ ಕುರಿತು ಧರ್ಮ ಚಿಂತನಗೋಷ್ಠಿ ಆಯೋಜಿಸಲಾಗಿದೆ. 25 ಗಣ್ಯರಿಗೆ ವಿಶೇಷ ಸನ್ಮಾನ: ರಾಜೇಂದ್ರ ಗಂದಗೆ ಮಾತನಾಡಿ, ರಜತ ಮಹೋತ್ಸವದ ಅಂಗವಾಗಿ ಬಸವ ತತ್ವ ಪ್ರಚಾರ, ಸಾಮಾಜಿಕ ಸೇವೆ ಹಾಗೂ ಧಾರ್ಮಿಕ ಜಾಗೃತಿಗೆ ಶ್ರಮಿಸಿದ 25 ಗಣ್ಯರು ಮತ್ತು ಶರಣ ದಂಪತಿಯನ್ನು ವಿಶೇಷವಾಗಿ ಸತ್ಕರಿಸಲಾಗುವುದು. ಮೂರು ದಿನಗಳಲ್ಲಿ 6 ರಾಷ್ಟ್ರಮಟ್ಟದ ವಿಶೇಷ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು ಎಂದರು.

ರಾಜೇಂದ್ರ ಜೊನ್ನಿಕೇರಿ, ತಮಿಳುನಾಡಿನ ರಾಷ್ಟ್ರೀಯ ಬಸವ ದಳದ ರಾಜ್ಯಾಧ್ಯಕ್ಷೆ ಶರಣೆ ನಿರ್ಮಲಾ ಹಾಗೂ ಎಸ್. ಮೇಘೇಶ್ವರನ್ ಅವರಿಗೆ 'ಬಸವ ಕಾಯಕ ರತ್ನ,' ಪ್ರಶಸ್ತಿ ಮತ್ತು ಚಿತ್ರದುರ್ಗದ ಶರಣ ದಂಪತಿಗಳಾದ ಅಕ್ಕಮಹಾದೇವಿ ಹಾಗೂ ತಿಪ್ಪೇಸ್ವಾಮಿ ಅವರಿಗೆ 'ಧರ್ಮಸಂಸ್ಕಾರ ರತ್ನ' ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು.

ಕಿಷ್ಕಿಂಧ ವಿಶ್ವವಿದ್ಯಾಲಯದ ಎರಡನೆಯ ಘಟಿಕೋತ್ಸವ ನಾಳೆ

ಬಳ್ಳಾರಿ ಅ 22. ಕಿಷ್ಕಿಂದ ವಿಶ್ವವಿದ್ಯಾಲಯದ ಪ್ರಥಮ ಘಟಿಕೋತ್ಸವವನ್ನು ಡಿಸೆಂಬರ್ 24, 2025ರಂದು ಆಯೋಜಿಸಲಾಗಿತ್ತು. ಕರ್ನಾಟಕದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ವಿಸಿಟರ್‌ಗಳಾದ ಮಾನ್ಯ ಶ್ರೀ ಥಾವರ್‌ಚಂದ್ ಗೆಹ್ಲೋಟ್ ಜಿ, ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಸಚಿವರು ಹಾಗೂ ಪ್ರೋ–ವಿಸಿಟರ್‌ಗಳಾದ ಮಾನ್ಯ ಡಾ. ಎಂ.ಸಿ. ಸುಧಾಕರ್ ಅವರು ಭಾಗವಹಿಸಿದ್ದರು. ವಳಬಳ್ಳಾರಿ ಗ್ರಾಮದ ಸುವರ್ಣಗಿರಿ ವಿರಕ್ತ ಮಠದ ಪರಮಪೂಜ್ಯ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು ಅವರಿಗೆ ಕಿಷ್ಕಿಂದ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ನೀಡಿದ್ದು ಇಂದು ಸ್ಮರಣೀಯ.

ಇದೇ ಹುಮ್ಮಸ್ಸು ಮತ್ತು ಸ್ಫೂರ್ತಿಯಿಂದ ವಿಶ್ವವಿದ್ಯಾಲಯದ ಎರಡನೇಯ ಘಟಿಕೋತ್ಸವವನ್ನು ಅಕ್ಟೋಬರ್ 24, 2026, ಶನಿವಾರದಂದು ಬಳ್ಳಾರಿ–ಸಿರುಗುಪ್ಪ ರಸ್ತೆ ಮಾರ್ಗದಲ್ಲಿರುವ ಮೌಂಟ್ ವ್ಯೂ ಕ್ಯಾಂಪಸ್‌ನಲ್ಲಿ ಆಯೋಜಿಸಲಾಗಿದೆ. ಘಟಿಕೋತ್ಸವದಲ್ಲಿ ಕಿಷ್ಕಿಂದ ವಿಶ್ವವಿದ್ಯಾಲಯದ ಬಿಸಿಎ, ಎಂಬಿಎ, ಎಂಸಿಎ, ಮತ್ತು ಎಂಟೆಕ್ ಕೋರ್ಸ್‌ಗಳ ವಿದ್ಯಾರ್ಥಿಗಳ ಪದವಿ ಪ್ರದಾನ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಹಾಗೂ ರ?ಯಾಂಕ್ ವಿಜೇತಕರಿಗೆ ಪದಕ ಪ್ರದಾನ ಮಾಡಲಾಗುವುದು.

ಈ ಘಟಿಕೋತ್ಸವ ಸಮಾರಂಭಕ್ಕೆ ಕರ್ನಾಟಕದ ಸರಕಾರದ ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾಲಯದ ಸಹ ಸಂದರ್ಶಕರಾದ ಮಾನ್ಯ ಶ್ರೀ ಬಸವರಾಜ ರಾಯರೆಡ್ಡಿ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸಿಲಿದ್ದಾರೆ. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೊ), ಟೆಲಿಮೆಟ್ರಿ ಟ್ರ್ಯಾಕಿಂಗ್ ಮತ್ತು ಕಮಾಂಡ್ ನೆಟ್‌ವರ್ಕ್‌ನಲ್ಲಿ ಹಿರಿಯ ವಿಜ್ಞಾನಿ ಹಾಗೂ ಇಂಜಿನಿಯರ್ ಶ್ರೀಮತಿ ರೂಪಾ ಎಂ.ವಿ. ಅವರು ಘಟಿಕೋತ್ಸವ ಭಾಷಣವನ್ನು ಮಾಡಲಿದ್ದಾರೆ. ಹಿರಿಯ ರಾಜಕೀಯ ಮುತ್ಸದ್ದಿ ಹಾಗೂ ಮಾಜಿ ಸಚಿವರಾದ ಶ್ರೀ ಬಿ.ಆರ್. ಯಾವಗಲ್ ಅವರು ಗೌರವ ಅತಿಥಿಗಳಾಗಿ ಭಾಗವಹಿಲಿದ್ದಾರೆ.

ಉದ್ಯಮಿ, ತಂತ್ರಜ್ಞಾನದ ರೂವಾರಿಗಳಾದ ಶ್ರೀ ಗಿರೀಶ್ ರಾಮಣ್ಣ ಅವರಿಗೆ ಇದೇ ಸಂದರ್ಭದಲ್ಲಿ ಕಿಷ್ಕಿಂದ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪದವಿ (ಹಾನರಿಸ್ ಕಾಸಾ) ಪ್ರದಾನ ಮಾಡಲಾಗುತ್ತದೆ. ಗಿರೀಶ್ ಅವರು ತಮ್ಮ ಕ್ಯು–ಸ್ಪೈಡರ್ಸ್ ಮತ್ತು ಜೆ–ಸ್ಪೈಡರ್ಸ್ ಸಂಸ್ಥೆಯ ಮೂಲಕ ಸಹಸ್ರಾರು ಯುವಕರಿಗೆ ಆಧುನಿಕ ತರಬೇತಿ ಮತ್ತು ಕೌಶಲ್ಯಗಳನ್ನು ನೀಡುವ ಮೂಲಕ ಯುವಕರಿಗೆ ಉದ್ಯೋಗ ಕಲ್ಪಿಸಿ, ಸಮಾಜದ ಅಭಿವೃದ್ಧಿಗೆ ಕಾರಣೀಭೂತರಾಗಿದ್ದಾರೆ. ಅಂತೆಯೇ, ಇವರ ಮೌಲ್ಯಾಧರಿತವಾದ ತಾಂತ್ರಿಕ ಶಿಕ್ಷಣ ವಲಯದ ಸೇವೆಯನ್ನು ಗುರುತಿಸಿ, ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪದವಿಯನ್ನು ಪ್ರದಾನ ಮಾಡಲಾಗುತ್ತಿದೆ. ಶೈಕ್ಷಣಿಕ ಸಾಧನೆಯಲ್ಲಿ ಉನ್ನತ ಸ್ಥಾನಗಳಿಸಿದ ವಿದ್ಯಾರ್ಥಿಗಳನ್ನು ಘಟಿಕೋತ್ಸವದಲ್ಲಿ ಗೌರವಿಸಲಾಗುತ್ತಿದೆ. ಬಿಸಿಎ ಪದವಿಯ ವಿಭಾಗದಲ್ಲಿ, ಕುಮಾರಿ ಶೃತಿ ಅವರು 9.72 ಸಿಜಿಪಿಎದೊಂದಿಗೆ ಪ್ರಥಮ ರ?ಯಾಂಕ್ ಪಡೆದು ಚಿನ್ನದ ಪದಕಕ್ಕೆ ಭಾಜನರಾಗಿದ್ದಾರೆ. ಕು. ಎಂ. ಲತಾ ಅವರು 9.65 ಸಿಜಿಪಿಎದೊಂದಿಗೆ ದ್ವಿತೀಯ ರ?ಯಾಂಕ್ ಪಡೆದು ಬೆಳ್ಳಿಯ ಪದಕವನ್ನು ಸ್ವೀಕರಿಸಲಿದ್ದಾರೆ.

ಎಂಬಿಎ ವಿಭಾಗದಲ್ಲಿ, ಕು. ಶ್ವೇತಾ ಜಿ ಅವರು 9.77 ಸಿಜಿಪಿಎದೊಂದಿಗೆ ಪ್ರಥಮ ರ?ಯಾಂಕ್ ಪಡೆದು ಚಿನ್ನದ ಪದಕವನ್ನು ಸ್ವೀಕರಿಸಲಿದ್ದು, ಕು. ಮರಾಠಿ ಸಾಹಿತ್ಯ ಅವರು 9.69 ಸಿಜಿಪಿಎದೊಂದಿಗೆ ದ್ವಿತೀಯ ರ?ಯಾಂಕ್ ಪಡೆದು ಬೆಳ್ಳಿಯ ಪದಕವನ್ನು ಸ್ವೀಕರಿಸಲಿದ್ದಾರೆ.

ಎಂಸಿಎ ವಿಭಾಗದಲ್ಲಿ, ಕು. ಆರ್.ಎಂ. ಸುಹಾನಾ ಸಹ್ರೀನ್ ಅವರು 9.9 ಸಿಜಿಪಿಎದೊಂದಿಗೆ ಪ್ರಥಮ ರ?ಯಾಂಕ್ ಪಡೆದು ಚಿನ್ನದ ಪದಕವನ್ನು ಸ್ವೀಕರಿಸಲಿದ್ದು, ಕು. ಪೆದ್ದದೇವರ ನಜ್ಮೀನ್ ಅವರು 9.73 ಸಿಜಿಪಿಎದೊಂದಿಗೆ ದ್ವಿತೀಯ ರ?ಯಾಂಕ್ ಪಡೆದು ಬೆಳ್ಳಿಯ ಪದಕವನ್ನು ಸ್ವೀಕರಿಸಲಿದ್ದಾರೆ. ಎಂಟೆಕ್ ವಿಭಾಗದಲ್ಲಿ 11 ಪುರುಷ ಮತ್ತು 07 ಮಹಿಳೆ ಒಟ್ಟು 18 ವಿದ್ಯಾರ್ಥಿಗಳು ಪದವಿ ಸ್ವೀಕರಿಸಲಿದ್ದಾರೆ. ಒಟ್ಟಾರೆಯಾಗಿ 155 ವಿದ್ಯಾರ್ಥಿಗಳು ಪದವಿಯನ್ನು

ವಿಭಾಗದಲ್ಲಿ, ಕು. ಪಿ. ಸಹನಾ ಪ್ರಸಾದ್ ಅವರು 9.31 ಸಿಜಿಪಿಎದೊಂದಿಗೆ ಪ್ರಥಮ ರ?ಯಾಂಕ್ ಪಡೆದು ಚಿನ್ನದ ಪದಕವನ್ನು ಸ್ವೀಕರಿಸಲಿದ್ದು, ಶ್ರೀ ಎಂ. ರಾಘವೇಂದ್ರ ಅವರು 9.29 ಸಿಜಿಪಿಎದೊಂದಿಗೆ ದ್ವಿತೀಯ ರ?ಯಾಂಕ್ ಪಡೆದು ಬೆಳ್ಳಿಯ ಪದಕವನ್ನು ಸ್ವೀಕರಿಸಲಿದ್ದಾರೆ.

ಬಿಸಿಎ ವಿಭಾಗದಲ್ಲಿ 20 ಪುರುಷ ಮತ್ತು 24 ಮಹಿಳೆ ಒಟ್ಟು 44 ವಿದ್ಯಾರ್ಥಿಗಳು ಪದವಿ ಸ್ವೀಕರಿಸಲಿದ್ದಾರೆ. ಎಂಬಿಎ ವಿಭಾಗದಲ್ಲಿ 33 ಪುರುಷ ಮತ್ತು 18

ತುಮಕೂರು ಲೋಕಸಭಾ ಸದಸ್ಯರು
ಶ್ರೀ ವಿ. ಸೋಮಣ್ಣ , ರೇಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆಯ ಸಚಿವರು,
ಭಾರತ ಸರ್ಕಾರ ಇವರ ನೇತೃತ್ವದಲ್ಲಿ.

ವೀರರಾಣಿ ಕಿತ್ತೂರು ರಾಣಿ ಚೆನ್ನಮ್ಮನವರ ಜಯಂತಿ ಹಾಗೂ “202ನೇ ವಿಜಯೋತ್ಸವ ಕಾರ್ಯಕ್ರಮ”

ಅಂಗವಾಗಿ ದಿನಾಂಕ 23ನೇ ಅಕ್ಟೋಬರ್ 2026 ರಂದು
ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರಿಂದ
ನವದೆಹಲಿಯ ಸಂಸತ್ ಆವರಣದಲ್ಲಿ, ಸಮಯ ಬೆಳಿಗ್ಗೆ 9.30ಕ್ಕೆ ಕಿತ್ತೂರು ರಾಣಿ ಚೆನ್ನಮ್ಮನವರ ಪ್ರತಿಮೆಗೆ

‘ಪುಷ್ಪನಮನ’ ಕಾರ್ಯಕ್ರಮ



ವಿ. ಸೋಮಣ್ಣ

ರೇಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆಯ ಸಚಿವರು,
ಭಾರತ ಸರ್ಕಾರ, ತುಮಕೂರು ಲೋಕಸಭಾ ಕ್ಷೇತ್ರ